## ಫಾಸ್ಟ್ ನ್ಯೂಸ್

### ಮಹಿಳೆ ಶವ ಪತ್ತೆ

» **ದಾವಣಗೆರೆ**

ಬಡಾವಣೆ ಪೊಲೀಸ್ ಠಾಣೆಯ ವ್ಯಾಪ್ತಿಯ ದಾವಣಗೆರೆ ವಿನೋಬನಗರದ ಅನುಶ್ರೀ 33 ವರ್ಷ, ಇವರು ಕಳೆದ ನ.2 ರಂದು ಮೃತಪಟ್ಟಿರುತ್ತಾರೆ. ಚಹರೆ ವಿವರ ಇಂತಿದೆ. ಎತ್ತರ 5 ಅಡಿ, ಕೆಂಪು ಗೋಧಿ ಮೈಬಣ್ಣ, ಸಾಧಾರಣ ಮೈಕಟ್ಟು, ದುಂಡು ಮುಖ ಹೊಂದಿರುತ್ತಾರೆ, ನಶೆ ಬಣ್ಣದ ಬಿಳಿ ಹೂವಿನ ಚಿತ್ರವಿರುವ ನೈಟಿ ಹುಡುಪು ಧರಿಸಿರುತ್ತಾರೆ. ಹೆಚ್ಚಿನ ಮಾಹಿತಿಗಾಗಿ ದೂ.ಸಂ:08192-272012, ಡಿವೈಎಸ್‌ಪಿ ನಗರ ಕಚೇರಿ-08192-259213, ಎಸ್.ಪಿ.ಕಚೇರಿ-08192-253400, ಕಂಟ್ರೋಲ್ ರೂಂ-08192-253100 ನ್ನು ಸಂಪರ್ಕಿಸಲು ಬಡಾವಣೆ ಪೊಲೀಸ್ ಠಾಣೆಯ ಠಾಣಾಧಿಕಾರಿ ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

### ಅನುದಾನಕ್ಕಾಗಿ ಅರ್ಜಿ ಆಹ್ವಾನ

» **ದಾವಣಗೆರೆ**

ಕೇಂದ್ರೀಯ ಸೈನಿಕ ಮಂಡಳಿಯು ಭಾರತೀಯ ಸೇನೆಯ ಜೆ.ಸಿ.ಓ ರ್‍ಯಾಂಕ್‌ವರೆಗಿನ ಅಥವಾ ವಾಯು ಸೇನೆ, ನೌಕಾ ಸೇನೆಯ ತತ್ಸಮಾನ ರ್‍ಯಾಂಕ್‌ವರೆಗಿನ ಮಾಜಿ ಸೈನಿಕರ ಮಕ್ಕಳು, ದ್ವಿತೀಯ ಪಿ.ಯು.ಸಿ ಯಲ್ಲಿ ಶೇ.60 ಕ್ಕಿಂತ ಅಧಿಕ ಅಂಕಗಳನ್ನು ಪಡೆದು, ಇಂಜಿನಿಯರಿಂಗ್, ಮೆಡಿಕಲ್ ಮತ್ತು ಇತರೆ ವೃತ್ತಿಪರ ಶಿಕ್ಷಣದಲ್ಲಿ ಪದವಿ ವ್ಯಾಸಂಗಕ್ಕಾಗಿ 2024-25ನೇ ಸಾಲಿನಲ್ಲಿ ಪ್ರವೇಶಾತಿ ಪಡೆದು ಪ್ರಥಮ ವರ್ಷದಲ್ಲಿ ವ್ಯಾಸಂಗ ಮಾಡುತ್ತಿರುವ ವಿದ್ಯಾರ್ಥಿಗಳಿಂದ ಪ್ರಧಾನ ಮಂತ್ರಿ ಶಿಷ್ಯವೇತನ ಯೋಜನೆಯಡಿ ಅರ್ಜಿಗಳನ್ನು ಆಹ್ವಾನಿಸಲಾಗಿದೆ. ಆಸಕ್ತರು ನವೆಂಬರ್ 30 ರೊಳಗಾಗಿ ಅರ್ಜಿ ಸಲ್ಲಿಸಕ್ಕದ್ದು. ಹೆಚ್ಚಿನ ಮಾಹಿತಿಗಾಗಿ ಕೇಂದ್ರೀಯ ಸೈನಿಕ ಮಂಡಳಿಯ ಜಾಲತಾಣ HTTPS://ONLINE.KSB.GOV.IN ಅಥವಾ ಸೈನಿಕ ಕಲ್ಯಾಣ ಮತ್ತು ಪುನರ್ವಸತಿ ಇಲಾಖೆ ದೂ. ಸಂ.: 08182-220925 ನ್ನು ಸಂಪರ್ಕಿಸಬಹುದು .

### ವಿಶೇಷ ಅಗತ್ಯತೆವುಳ್ಳ ಮಕ್ಕಳಿಗೆ ಉಚಿತ ವೈದ್ಯಕೀಯ ಶಿಬಿರ

» **ಚಿತ್ರದುರ್ಗ**

ಚಿತ್ರದುರ್ಗ ತಾಲ್ಲೂಕಿನ 2024-25ನೇ ಸಾಲಿನ 01 ರಿಂದ 12ನೇ ತರಗತಿಯಲ್ಲಿರುವ ಸರ್ಕಾರಿ ಮತ್ತು ಅನುದಾನಿತ ಶಾಲಾ ಮತ್ತು ಕಾಲೇಜುಗಳಲ್ಲಿ ಕಲಿಯುತ್ತಿರುವ ವಿಶೇಷ ಅಗತ್ಯತೆವುಳ್ಳ ಮಕ್ಕಳಿಗೆ ಇದೇ ನವೆಂಬರ್ 06ರಂದು ಬೆಳಿಗ್ಗೆ 10 ರಿಂದ ಸಂಜೆ 5 ರವರೆಗೆ ನಗರದ ಹೊಳಲ್ಕೆರೆ ರಸ್ತೆಯ ಮುಖ್ಯ ಅಂಚೆ ಕಚೇರಿ ಹತ್ತಿರದ ಗಾಯಿತ್ರಿ ಭವನ್ ಸಮೀಪದ ಸಂಪಿಗೆ ಸಿದ್ದೇಶ್ವರ ಪ್ರೌಢಶಾಲೆಯಲ್ಲಿ ಉಚಿತ ವೈದ್ಯಕೀಯ ಶಿಬಿರಯನ್ನು ಅಲಿಂಕೋ ಸಹಯೋಗದಲ್ಲಿ ನುರಿತ ವೈದ್ಯರಿಂದ ತಪಾಸಣಾ ಶಿಬಿರ ಹಮ್ಮಿಕೊಳ್ಳಲಾಗಿದೆ. ತಾಲ್ಲೂಕಿನಲ್ಲಿರುವ ದೈಹಿಕ ವಿಕಲತೆ, ಸಿ.ಪಿ. ಪೂರ್ಣದೃಷ್ಠಿದೋಷ, ಭೌದ್ಧಿಕ ವಿಕಲತೆ ಶ್ರವಣದೋಷ ಮತ್ತು ಬಹುವಿಕಲತೆ ಹೊಂದಿರುವ ವಿಕಲಚೇತನ ವಿದ್ಯಾರ್ಥಿಗಳು ಭಾಗವಹಿಸುವಂತೆ ಸಂಬಂಧಿಸಿದ ಶಾಲಾ ಮುಖ್ಯ ಶಿಕ್ಷಕರು ಹಾಗೂ ಪೋಷಕರು ಕ್ರಮವಹಿಸಿ ಈ ಶಿಬಿರದ ಸದುಪಯೋಗ ಪಡೆಯಬಹುದು. ಶಿಬಿರಕ್ಕೆ ಬರುವಾಗ ಯುಡಿಐಡಿ ಕಾರ್ಡ್, ವೈದ್ಯಕೀಯ ಪ್ರಮಾಣ ಪತ್ರದ ಜೆರಾಕ್ಸ್ ಪ್ರತಿ, ಬಿಪಿಎಲ್ ಕಾರ್ಡ್, ಜಾತಿ ಮತ್ತು ಆದಾಯ ಪ್ರಮಾಣ ಪತ್ರ, ಆಧಾರ್ ಕಾರ್ಡ್, 02 ಭಾವಚಿತ್ರ ಹಾಗೂ ವಿದ್ಯಾರ್ಥಿಯ ಬ್ಯಾಂಕ್ ಪುಸ್ತಕದ ಜೆರಾಕ್ಸ್‌ನ ಎರಡು ಪ್ರತಿಗಳೊಂದಿಗೆ ಶಿಬಿರಕ್ಕೆ ಹಾಜರಾಗುವುದು. ಈಗಾಗಲೇ ಯಾವುದೇ ಇಲಾಖೆ ಅಥವಾ ಸಂಸ್ಥೆಯಿಂದ ಸಾಧನ ಸಲಕರಣೆಯನ್ನು ಪಡೆದಿದ್ದು, ಅವು ಕಾರ್ಯನಿರ್ವಹಿಸುತ್ತಿದ್ದರೆ ಅಂತವರು ಈ ಶಿಬಿರಕ್ಕೆ ಹಾಜರಾಗಬಾರದು ಎಂದು ಸಾರ್ವಜನಿಕ ಶಿಕ್ಷಣ ಇಲಾಖೆ ಚಿತ್ರದುರ್ಗ ತಾಲ್ಲೂಕು ಕ್ಷೇತ್ರ ಶಿಕ್ಷಣಾಧಿಕಾರಿಗಳು ತಿಳಿಸಿದ್ದಾರೆ.

### ಮೇಘನಾ ಪಿಎಸ್ ಅವರಿಗೆ ಪಿಹೆಚ್‌ಡಿ ಪದವಿ

» **ಚಿತ್ರದುರ್ಗ**



ಚಿತ್ರದುರ್ಗ ನಗರದ ಸರ್ಕಾರಿ ಕಲಾ ಕಾಲೇಜಿನ ಸಹಾಯಕ ಪ್ರಾಧ್ಯಾಪಕರಾಗಿ ಸೇವೆ ಸಲ್ಲಿಸುತ್ತಿರುವ ಪಿ.ಎಸ್.ಮೇಘನಾ ಅವರಿಗೆ ದಾವಣಗೆರೆ ವಿಶ್ವವಿದ್ಯಾಲಯ ಪಿಹೆಚ್‌ಡಿ ಪದವಿ ನೀಡಿದೆ. ದಾವಣಗೆರೆ ವಿಶ್ವವಿದ್ಯಾನಿಲಯದ ವಾಣಿಜ್ಯಶಾಸ್ತ್ರ ವಿಭಾಗದ ಪ್ರಾಧ್ಯಾಪಕ ಡಾ.ಆರ್.ಸುಪ್ರಿಯ ಅವರ ಮಾರ್ಗದರ್ಶನದಲ್ಲಿ ವಾಣಿಜ್ಯಶಾಸ್ತ್ರ ವಿಭಾಗದಲ್ಲಿ "ಇಂಪ್ಯಾಕ್ಟ್ ಆಫ್ ಫೈನಾನ್ಸಿಯಲ್ ಇನ್ಕ್ಲೂಷನ್ ಸ್ಕೀಮ್ ಆನ್ ರೂರಲ್ ಹೌಸ್‌ಹೋಲ್ಡ್ಸ್" ವಿಷಯದ ಕುರಿತು ಮಹಾಪ್ರಬಂಧ ಮಂಡಿಸಿದ್ದರು.

### ಮಹಿಳೆ ಶವ ಪತ್ತೆ

» **ದಾವಣಗೆರೆ**

ಬಡಾವಣೆ ಪೊಲೀಸ್ ಠಾಣೆಯ ವ್ಯಾಪ್ತಿಯ ದಾವಣಗೆರೆ ವಿನೋಬನಗರದ ಅನುಶ್ರೀ 33 ವರ್ಷ, ಇವರು ಕಳೆದ ನ.2 ರಂದು ಮೃತಪಟ್ಟಿರುತ್ತಾರೆ. ಚಹರೆ ವಿವರ ಇಂತಿದೆ. ಎತ್ತರ 5 ಅಡಿ, ಕೆಂಪು ಗೋಧಿ ಮೈಬಣ್ಣ, ಸಾಧಾರಣ ಮೈಕಟ್ಟು, ದುಂಡು ಮುಖ ಹೊಂದಿರುತ್ತಾರೆ, ನಶೆ ಬಣ್ಣದ ಬಿಳಿ ಹೂವಿನ ಚಿತ್ರವಿರುವ ನೈಟಿ ಹುಡುಪು ಧರಿಸಿರುತ್ತಾರೆ. ಮಾಹಿತಿಗಾಗಿ ದೂ.ಸಂ:08192-

# ಅಜ್ಜಂಪೀರ್ ಖಾದ್ರಿ ನನಗೆ ತುಂಬಾ ಬೇಕಾದವರು: ನನಗಾಗಿ ಖಾದ್ರಿ ಶಾಸಕ ಸ್ಥಾನ ತ್ಯಜಿಸಲು ಸಿದ್ಧರಾಗಿದ್ದರು

» **ಶಿಗ್ಗಾಂವ್**



- **ಅಜ್ಜನೂ ಮುಖ್ಯಮಂತ್ರಿಯಾಗಿ, ಅಪ್ಪನೂ ಮುಖ್ಯಮಂತ್ರಿ ಆಗಿದ್ದವರ ಮಗನ ವಿರುದ್ಧ ಸಾಮಾನ್ಯ ಕುಟುಂಬದ ಪೈಲ್ವಾನ್ ಪಠಾಣ್ ಕಣದಲ್ಲಿದ್ದಾರೆ. ಇವರನ್ನು ಗೆಲ್ಲಿಸಿ: ಸಿಎಂ ಕರೆ**
- **ಶಿಗ್ಗಾಂವ್, ಸಂಡೂರು, ಚನ್ನಪಟ್ಟಣದಲ್ಲಿ ಕಾಂಗ್ರೆಸ್ ಗೆದ್ದರೆ ನನಗೆ ಇನ್ನೂ ಹೆಚ್ಚು ಶಕ್ತಿ ಬರತ್ತೆ. ಪಠಾಣ್ ಗೆಲ್ಲಿಸಿ ಕಳಿಸಿ: ಸಿಂ ಕರೆ**

ಅಜ್ಜನೂ ಮುಖ್ಯಮಂತ್ರಿಯಾಗಿ, ಅಪ್ಪನೂ ಮುಖ್ಯಮಂತ್ರಿ ಆಗಿದ್ದವರ ಮಗನ ವಿರುದ್ಧ ಸಾಮಾನ್ಯ ಕುಟುಂಬದ ಪೈಲ್ವಾನ್ ಪಠಾಣ್ ಕಣದಲ್ಲಿದ್ದಾರೆ. ಇವರನ್ನು ಗೆಲ್ಲಿಸಿ, ವಿಧಾನಸೌಧಕ್ಕೆ ಕಳುಹಿಸಿ ಎಂದು ಸಿಎಂ ಸಿದ್ದರಾಮಯ್ಯ ಅವರು ಕರೆ ನೀಡಿದರು.

ಹುಲಗೂರ ಗ್ರಾಮದಲ್ಲಿ ನೆರೆದಿದ್ದ ಬೃಹತ್ ಜನಸ್ತೋಮದಲ್ಲಿ ಕಾಂಗ್ರೆಸ್ ಪಕ್ಷದ ಪರವಾಗಿ ಚುನಾವಣಾ ಪ್ರಚಾರ ಮಾಡಿ ಮಾತನಾಡಿದರು.

ಮಾಜಿ ಮುಖ್ಯಮಂತ್ರಿ ಎಸ್.ಆರ್.ಬೊಮ್ಮಾಯಿ ಅವರ ಮೊಮ್ಮಗ, ಮಾಜಿ ಮುಖ್ಯಮಂತ್ರಿ ಬಸವರಾಜ ಬೊಮ್ಮಾಯಿ ಅವರ ಪುತ್ರ ಭರತ್ ವಿರುದ್ಧ ಸಾಮಾನ್ಯ ಕುಟುಂಬದ ಪಠಾಣ್ ಅವರನ್ನು ಗೆಲ್ಲಿಸಿ ಎಂದರು.

ಕೊರೋನಾ ಸಂದರ್ಭದಲ್ಲಿ ಸತ್ತ ಹೆಣಗಳ ಲೆಕ್ಕದಲ್ಲೂ ಲಂಚ ಪಡೆದು ದಾಖಲೆ ಮಾಡಿದವರು ಬಸವರಾಜ ಬೊಮ್ಮಾಯಿ. ಸತ್ತ ಹೆಣಗಳ ಲೆಕ್ಕದಲ್ಲೂ ಲಂಚ ಪಡೆದ ಏಕೈಕ ಸರ್ಕಾರ ಬೊಮ್ಮಾಯಿ ಅವರದ್ದಾಗಿತ್ತು. ಕೋವಿಡ್ ಸಂದರ್ಭದಲ್ಲೂ, ಸಂಕಷ್ಟದಲ್ಲಿ ನರಳುವಾಗಲೂ ಲಂಚ ಪಡೆದವರ ಪುತ್ರನನ್ನು ಸೋಲಿಸಿ ಎಂದರು.

ಅಜ್ಜಂಪೀರ್ ಖಾದ್ರಿ ನನಗೆ ತುಂಬಾ ಬೇಕಾದವರು. ನನಗಾಗಿ ಖಾದ್ರಿ ಶಾಸಕ ಸ್ಥಾನ ತ್ಯಜಿಸಲು ಸಿದ್ದರಾಗಿದ್ದರು. ನಾನು ಸೋತು, ಖಾದ್ರಿ ಗೆದ್ದಿದ್ದಾಗ ಸ್ವತಃ ಖಾದ್ರಿಯವರೇ ಬಂದು ಅವರು ಶಾಸಕ ಸ್ಥಾನವನ್ನು ನನಗಾಗಿ ಬಿಟ್ಟು ಕೊಡಲು ಸಿದ್ದರಾಗಿದ್ದರು. ನಮ್ಮಿಬ್ಬರ ನಡುವೆ ಅಷ್ಟು ಆತ್ಮೀಯತೆ. ಹೀಗಾಗಿ ನಮ್ಮ ಮಾತಿಗೆ ಬೆಲೆ ನೀಡಿ ನಾಮಪತ್ರ ವಾಪಾಸ್ ಪಡೆದು ಪಠಾಣ್ ಅವರನ್ನು ಗೆಲ್ಲಿಸಲು ಟೊಂಕ ಕಟ್ಟಿ ಕೆಲಸ ಮಾಡುತ್ತಿದ್ದಾರೆ ಎಂದು ಮೆಚ್ಚುಗೆ ಸೂಚಿಸಿದರು.

**ಮೋದಿಯ ಸುಳ್ಳುಗಳು:** ಸಿದ್ದರಾಮಯ್ಯ ಸರ್ಕಾರದಿಂದ ಗ್ಯಾರಂಟಿ ಯೋಜನೆಗಳನ್ನು ಜಾರಿಗೊಳಿಸಲು ಸಾಧ್ಯವೇ ಇಲ್ಲ ಎಂದು ಪ್ರಧಾನಿ ನರೇಂದ್ರ ಮೋದಿ ಇಡೀ ದೇಶಕ್ಕೆ ಸುಳ್ಳುಗಳ ಮೇಲೆ ಸುಳ್ಳುಗಳನ್ನು ಹೇಳಿದ್ದರು.

ಆದರೆ ನಮ್ಮ ಸರ್ಕಾರ ಜಾರಿಗೆ ಬಂದ ಎಂಟೇ ತಿಂಗಳಲ್ಲಿ ಐದಕ್ಕೆ ಐದೂ ಗ್ಯಾರಂಟಿಗಳನ್ನೂ ಜಾರಿ ಮಾಡಿದ್ದೇವೆ. ರಾಜ್ಯದ ಲಕ್ಷಾಂತರ ತಾಯಂದಿರು ಗ್ಯಾರಂಟಿಗಳ ಅನುಕೂಲಗಳನ್ನು ಪ್ರತೀ ದಿನ ಪಡೆಯುತ್ತಿದ್ದಾರೆ. ಮೋದಿ ಅವರ ಸುಳ್ಳುಗಳು ಮಾತ್ರ ನಿಲ್ಲುತ್ತಲೇ ಇವೆ ಎಂದು ಟೀಕಿಸಿದರು.

ಯಡಿಯೂರಪ್ಪ ಮುಖ್ಯಮಂತ್ರಿ ಆಗಿದ್ದಾಗ ರೈತರ ಸಾಲ ಮನ್ನಾ ಮಾಡಿ ಎಂದರೆ, "ರೈತರ ಸಾಲ ಮನ್ನಾ ಮಾಡಲು ನಮ್ಮ ಬಳಿ ಪ್ರಿಂಟಿಂಗ್ ಮೆಷಿನ್ ಇಲ್ಲ" ಎಂದು ಯಡಿಯೂರಪ್ಪ ಹೇಳಿದ್ದರು. ಹೋಗಲಿ ಬಸವರಾಜ ಬೊಮ್ಮಾಯಿ ಅವರೂ ಮುಖ್ಯಮಂತ್ರಿಯಾಗಿ ರೈತರ ಸಾಲ ಮನ್ನಾ ಮಾಡಲಿಲ್ಲ. ಇವರು ಯಾವ ಮುಖ ಇಟ್ಟುಕೊಂಡು ರೈತರ ಮತ ಕೇಳುತ್ತಿದ್ದಾರೆ ಎಂದರು.

**ಕ್ಷೇತ್ರಕ್ಕೆ ಏನು ಕೊಟ್ರಿ ಬೊಮ್ಮಾಯಿಯವರೇ?:** ಕೃಷಿ ಸಚಿವರಾಗಿ, ಗೃಹ ಸಚಿವರಾಗಿ, ಮುಖ್ಯಮಂತ್ರಿಯಾಗಿ ನಿಮ್ಮ ಕ್ಷೇತ್ರಕ್ಕೆ ಏನು ಕೊಟ್ಟಿದ್ದೀರಿ ಬೊಮ್ಮಾಯಿಯವರೇ? ನೀವು ಸಿಎಂ ಆಗಿದ್ದಾಗಲಾದರೂ ಒಂದೇ ಒಂದು ಮನೆ ಕಟ್ಟಿಸಿಕೊಡಲಿಲ್ಲವಲ್ಲಾ ಏಕೆ ಸ್ವಾಮಿ ಎಂದು ಪ್ರಶ್ನಿಸಿದರು.

**ಜನರಿಗೆ ಹೇಳಲು ಬಿಜೆಪಿ ಬಳಿ ಸುಳ್ಳು ಬಿಟ್ಟರೆ ಬೇರೆ ಏನೂ ಇಲ್ಲ**

ಬಿಜೆಪಿ ಅಧಿಕಾರದಲ್ಲಿದ್ದಾಗ ಲೂಟಿ ಮಾಡಿದ್ದು ಬಿಟ್ಟರೆ ಬೇರೇನೂ ಮಾಡಲಿಲ್ಲ. ಹಿಂದುಳಿದವರಿಗೆ, ದಲಿತರಿಗೆ, ಮಹಿಳೆಯರಿಗೆ, ಬಡವರಿಗೆ ಇಂತಿಂಥಾ ಕೆಲಸ ಮಾಡಿದ್ದೇವೆ ಎಂದು ಜನರಿಗೆ ಹೇಳಲು ಏನೂ ಇಲ್ಲ. ಏನಾದ್ರೂ ಜನರ ಕೆಲಸ ಮಾಡಿದ್ರೆ ತಾನೆ ಎಂದ ಸಿಎಂ, ಬಿಜೆಪಿ ಬಳಿ ಸುಳ್ಳು ಬಿಟ್ಟರೆ ಬೇರೆ ಏನೂ ಇಲ್ಲ ಎಂದರು.

ವಕ್ಫ್ ಭೂಮಿ ತೆರವುಗೊಳಿಸಿ ಎಂದು ಯಡಿಯೂರಪ್ಪ, ಬೊಮ್ಮಾಯಿ, ಕುಮಾರಸ್ವಾಮಿ ಸರ್ಕಾರದಲ್ಲೂ ನೋಟಿಸ್ ನೀಡಿದ್ದರು. ನಾನು ಎಲ್ಲಾ ನೋಟಿಸ್ ವಾಪಾಸ್ ಪಡೆಯಲು ಸೂಚಿಸಿ, ಯಾವ ರೈತರನ್ನೂ ಒಕ್ಕಲೆಬ್ಬಿಸುವುದಿಲ್ಲ ಎಂದು ಸ್ಪಷ್ಟಪಡಿಸಿದ ಮೇಲೂ ಪ್ರತಿಭಟನೆ ಮಾಡ್ತಿದ್ದಾರೆ. ಇವರಿಗೆ ಮಾನ ಮರ್ಯಾದೆ ಇದೆಯಾ ಎಂದು ಪ್ರಶ್ನಿಸಿದರು.

**ಸಿದ್ದರಾಮಯ್ಯ ಕಂಡರೆ ಹೊಟ್ಟೆಯುರಿ:** ನಮ್ಮ ಸರ್ಕಾರ ಬಡವರು, ಮಧ್ಯಮ ವರ್ಗದವರ ಪರವಾಗಿ ಗ್ಯಾರಂಟಿಗಳನ್ನು ರೂಪಿಸಿ ಜಾರಿಗೆ ತಂದಿದ್ದಕ್ಕಾಗಿ ಬಿಜೆಪಿಗೆ ನನ್ನನ್ನು ಕಂಡರೆ ಹೊಟ್ಟೆಯುರಿ. ಪಠಾಣ್ ಅವರನ್ನು ಗೆಲ್ಲಿಸುವ ಮೂಲಕ ಅವರ ಹೊಟ್ಟೆಕಿಚ್ಚಿಗೆ ಸರಿಯಾದ ಪಾಠ ಕಲಿಸಿ ಎಂದು ಕರೆ ನೀಡಿದರು.

ಶಿಗ್ಗಾಂವ್, ಸವಣೂರು ಏತ ನೀರಾವರಿಗೆ ಹಣ ಕೊಟ್ಟವರು ನಾವು. ಬೊಮ್ಮಾಯಿಯವರೇ ನೀವೇನು ಮಾಡಿದ್ರಿ ಸ್ವಾಮಿ ?

ವಿದೇಶದಲ್ಲಿರುವ ಕಪ್ಪುಹಣ ತಂದು ಎಲ್ಲರ ಖಾತೆಗೆ 15 ಲಕ್ಷ ಕೊಡ್ತೀವಿ ಅಂದ್ರಲ್ಲಾ ಮೋದಿಯವರೇ ಕೊಟ್ರೇನ್ರೀ? ವರ್ಷಕ್ಕೆ 2 ಕೋಟಿ ಉದ್ಯೋಗ ಸೃಷ್ಟಿ ಮಾಡ್ತೀನಿ ಅಂದ್ರಲ್ಲಾ ಮೋದಿಯವರೇ, ಮಾಡಿದ್ರಾ ? ಎಲ್ರೀ ಸ್ವಾಮಿ ನಿಮ್ಮ ಅಚ್ಛೆ ದಿನ್? ರೈತರ ಆದಾಯ ದುಪ್ಪಟ್ಟು ಮಾಡ್ತೀನಿ ಅಂದ್ರಲ್ಲಾ ಮೋದಿಯವರೇ ಮಾಡಿದ್ರಾ ? ಮೋದಿ ಪ್ರಧಾನಿ ಆಗುವ ಮೊದಲು ದೇಶದ ಸಾಲ ಇದ್ದದ್ದು 54 ಕೋಟಿ ಮಾತ್ರ. ಈಗ ನಿಮ್ಮ ಅವಧಿಯಲ್ಲಿ ದೇಶದ ಸಾಲವನ್ನು 185 ಲಕ್ಷ ಕೋಟಿಗೆ ಏರಿಸಿದ್ದೀರಿ. ಇದೇನಾ ಸ್ವಾಮಿ ನಿಮ್ಮ ಅಚ್ಛೆ ದಿನ್ ಎಂದು ವ್ಯಂಗ್ಯವಾಡಿದರು.

ದೇಶದ ಆರ್ಥಿಕತೆ ಎಕ್ಕುಡಿಸಿ, ನಿರುದ್ಯೋಗ ಸಮಸ್ಯೆ ವಿಪರೀತ ಹೆಚ್ಚಿಸಿ, ಡಾಲರ್ ಎದುರು ರೂಪಾಯಿ ಬೆಲೆ ಕುಸಿಯುವಂತೆ ಮಾಡಿ, ಡೀಸೆಲ್, ಗ್ಯಾಸ್, ಪೆಟ್ರೋಲ್, ಎಣ್ಣೆ, ಚಿನ್ನ, ಕಾಳು, ಬೇಳೆ ಎಲ್ಲದರ ಬೆಲೆ ಹೆಚ್ಚಿಸಿದ ಮೋದಿಯವರೇ ನೀವು ನಮಗೆ ಬುದ್ದಿ ಹೇಳೋಕೆ ಬರ್ತೀರಾ ಎಂದು ಮೋದಿಯವರ ಎದುರು ಅವರ ಸಾಲು ಸಾಲು ವೈಫಲ್ಯಗಳನ್ನು ಉಲ್ಲೇಖಿಸಿ ಪ್ರಶ್ನಿಸಿದರು. ಬೊಮ್ಮಾಯಿಯವರೇ ನಮ್ಮನ್ನು ಪ್ರಶ್ನಿಸುವ ಯಾವ ನೈತಿಕತೆ ನಿಮಗಿದೆ ಎಂದರು.

ಸಂಡೂರು, ಶಿಗ್ಗಾಂವ್, ಚನ್ನಪಟ್ಟಣ ಉಪ ಚುನಾವಣೆಯಲ್ಲಿ ಕಾಂಗ್ರೆಸ್ ಗೆದ್ದರೆ ನನಗೆ ಇನ್ನಷ್ಟು ಶಕ್ತಿ ಬರುತ್ತದೆ. ಸಂಡೂರು, ಚನ್ನಪಟ್ಟಣದಲ್ಲೂ ನಾವು ಗೆಲ್ತೀವಿ. ಆದ್ದರಿಂದ ಇಲ್ಲಿ ಪಠಾಣ್ ಅವರನ್ನು ಗೆಲ್ಲಿಸಿ ಎಂದು ಕರೆ ನೀಡಿದರು

### ತಾಲ್ಲೂಕು ಆರೋಗ್ಯ ಶಿಕ್ಷಣಾಧಿಕಾರಿ ಎನ್.ಎಸ್.ಮಂಜುನಾಥ್ ಮನವಿ

# ಕುಷ್ಠರೋಗ ಭಯ ಬಿಡಿ, ತಪಾಸಣೆಗೆ ಸಹಕರಿಸಿ

» **ಚಿತ್ರದುರ್ಗ**



ಕುಷ್ಠರೋಗದ ಬಗ್ಗೆ ಭಯ, ಸಾಮಾಜಿಕ ಕಳಂಕ ಬಿಟ್ಟು, ತಪಾಸಣೆಗೆ, ಚಿಕಿತ್ಸೆ ನೀಡಲು ಸಹಕರಿಸಿ ಎಂದು ಚಿತ್ರದುರ್ಗ ತಾಲ್ಲೂಕಿನ ಆರೋಗ್ಯ ಶಿಕ್ಷಣಾಧಿಕಾರಿ ಎನ್.ಎಸ್.ಮಂಜುನಾಥ್ ಹೇಳಿದರು.

ಚಿತ್ರದುರ್ಗ ನಗರದ ಎಲ್ಲಾ ವಾರ್ಡ್‌ಗಳಲ್ಲಿ ಕುಷ್ಠರೋಗ ಪ್ರಕರಣ ಪತ್ತೆ ಆಂದೋಲನ ಮನೆ ಮನೆ ಭೇಟಿ, ಮಾಹಿತಿ ಶಿಕ್ಷಣ, ಕುಷ್ಠರೋಗ ಲಕ್ಷಣ ಪತ್ತೆಹಚ್ಚುವಿಕೆ ಕಾರ್ಯಕ್ರಮವು ನಡೆಯುತ್ತಿದ್ದು, ಸೋಮವಾರ ತಾಲ್ಲೂಕು ಆರೋಗ್ಯ ಅಧಿಕಾರಿಗಳ ತಂಡ ವಿವಿಧಡೆ ಪರಿಶೀಲನೆ ಭೇಟಿ ನಡೆಸಿ ಮನೆಗಳಲ್ಲಿ ಅಂತರ್ ವೈಯಕ್ತಿಕ ಸಮಾಲೋಚನೆ, ಅಲ್ಲಲ್ಲಿ ಗುಂಪು ಸಭೆಗಳನ್ನು ನಡೆಸಿ ಮಾಹಿತಿ ಶಿಕ್ಷಣ ಕಾರ್ಯಕ್ರಮದಲ್ಲಿ ಅವರು ಮಾತನಾಡಿದರು.

ನಗರದ ಭೀಮಪ್ಪ ನಾಯಕ ಪ್ರೌಢಶಾಲೆ ರಸ್ತೆಯಲ್ಲಿ ಗುಂಪು ಸಭೆಯಲ್ಲಿ ತಾಲ್ಲೂಕು ಆರೋಗ್ಯ ಶಿಕ್ಷಣಾಧಿಕಾರಿ ಎನ್.ಎಸ್. ಮಂಜುನಾಥ್ ಮಾತನಾಡಿ, ಇದು ದೀರ್ಘಕಾಲ ಖಾಯಿಲೆಯಾಗಿದ್ದು, ಬ್ಯಾಕ್ಟೀರಿಯಾಗಳಾದ ಮೈಕೋಬ್ಯಾಕ್ಟೀರಿಯಂ ಲೆಪ್ರೆಯಿ ಮತ್ತು ಮೈಕೋಬ್ಯಾಕ್ಟೀರಿಯಂ ಲೆಪ್ರೋಮತೊಸಿಸ್‌ದಿಂದ ಬರುವ ಖಾಯಿಲೆಯಾಗಿದ್ದು, ಚರ್ಮದ ಬಾಧೆ ಇದರ ಪ್ರಾಥಮಿಕ ಬಾಹ್ಯ ಚಿಹ್ನೆ. ಕುಷ್ಠರೋಗ ಗುಣಪಡಿಸಿಕೊಳ್ಳದಿದ್ದಲ್ಲಿ, ಅದು ಅಭಿವೃದ್ಧಿಗೊಳ್ಳುತ್ತ ಹೋಗಿ ಚರ್ಮಕ್ಕೆ, ನರಗಳಿಗೆ, ಕಾಲುಗಳಿಗೆ ಮತ್ತು ಕಣ್ಣುಗಳಿಗೆ ಶಾಶ್ವತ ಹಾನಿ ಉಂಟು ಮಾಡುತ್ತದೆ ಎಂದು ತಿಳಿಸಿದ ಅವರು, ಶೀಘ್ರ ಪತ್ತೆ ಬಹುವಿಧಚಿಕಿತ್ಸೆಯಿಂದ ಕುಷ್ಠರೋಗ ಸಂಪೂರ್ಣ ಗುಣಮುಖವಾಗುತ್ತದೆ ಎಂದರು.

ಕ್ಷೇತ್ರ ಆರೋಗ್ಯ ಶಿಕ್ಷಣಾಧಿಕಾರಿ ಬಿ ಜಾನಕಿ ಮಾತನಾಡಿ. ಇದೇ ನ.04 ರಿಂದ 21 ರವರೆಗೆ ಮನೆ ಮನೆ ಭೇಟಿ ಕುಷ್ಠರೋಗದ ಬಗ್ಗೆ ಮಾಹಿತಿ ಶಿಕ್ಷಣ ರೋಗ ತಪಾಸಣೆ ಮಾಡಲು ನಿಮ್ಮ ನಿಮ್ಮ ಮನೆಗಳಿಗೆ ಆಶಾ ಕಾರ್ಯಕರ್ತೆಯರು ಪ್ರಾಥಮಿಕ ಆರೋಗ್ಯ ಸುರಕ್ಷತಾ ಅಧಿಕಾರಿಗಳು ಆರೋಗ್ಯ ನಿರೀಕ್ಷಣಾಧಿಕಾರಿಗಳು ಭೇಟಿ ನೀಡುತ್ತಾರೆ.

ಈ ಸಂದರ್ಭದಲ್ಲಿ ಸಾರ್ವಜನಿಕರು ತಪ್ಪದೇ ಸಹಕರಿಸಿ ತಪಾಸಣೆ ಮಾಡಿಸಿಕೊಳ್ಳಿ. ಶಂಕಿತ ಪ್ರಕರಣಗಳ ಪಟ್ಟಿಯನ್ನು ಮಾಡಿ ತಜ್ಞರಿಂದ ಮರು ತಪಾಸಣೆ ನಡೆಸಿ ಕುಷ್ಠರೋಗದ ಖಚಿತತೆ ಪಡಿಸಿಕೊಂಡ ನಂತರ ಬಹು ವಿಧ ಚಿಕಿತ್ಸಾ ವಿಧಾನಕ್ಕೆ ಒಳಪಡಿಸಲಾಗುತ್ತದೆ. ತಪಾಸಣೆ ಚಿಕಿತ್ಸೆ ಸಂಪೂರ್ಣ ಉಚಿತವಾಗಿರುತ್ತದೆ.

ತಮ್ಮ ಮನೆ ಮನೆಗೆ ಬರುವ ಆಶಾ ಕಾರ್ಯಕರ್ತೆಯರಿಗೆ ಯಾವುದೇ ಗೌಪ್ಯತೆ ಮಾಡದೆ ಸಂಪೂರ್ಣ ಮಾಹಿತಿ ನೀಡಿ ಕುಷ್ಠರೋಗ ಮುಕ್ತ ಸಮಾಜ ನಿರ್ಮಿಸಿ ಎಂದರು.

ಗುಂಪು ಸಭೆಯಲ್ಲಿ ಆರೋಗ್ಯ ಸುರಕ್ಷತಾ ಅಧಿಕಾರಿ ಗೀತಮ್ಮ, ಆಶಾ ಕಾರ್ಯಕರ್ತೆ ಅನುರಾಧ, ಸ್ಥಳೀಯ ಕುಟುಂಬಸ್ಥರು ಭಾಗವಹಿಸಿದ್ದರು.

### ವಾತ್ಸಲ್ಯ ಮನೆ ನಿರ್ಮಾಣಕ್ಕೆ ಪೂಜೆ



**ಚಿತ್ರದುರ್ಗ :** ಶ್ರೀಕ್ಷೇತ್ರ ಧರ್ಮಸ್ಥಳ ಗ್ರಾಮಾಭಿವೃದ್ಧಿ ಯೋಜನೆ ಸಿರಿಗೆರೆ ಯೋಜನಾ ಕಚೇರಿ ವ್ಯಾಪ್ತಿಯ ಮಾಳಪ್ಪನಹಟ್ಟಿ ವಲಯದ ಸೊಲ್ಲಾಪುರ ಗ್ರಾಮದ ವೃದ್ದೆ ನಾಗಮ್ಮನವರಿಗೆ ಮಂಜೂರಾಗಿರುವ ವಾತ್ಸಲ್ಯ ಮನೆ ನಿರ್ಮಾಣಕ್ಕೆ ಗುದ್ದಲಿ ಪೂಜೆಯನ್ನು ನೆರವೇರಿಸಲಾಯಿತು. ಯೋಜನಾಧಿಕಾರಿ ರವಿಚಂದ್ರ ಗುದ್ದಲಿ ಪೂಜೆ ನೆರವೇರಿಸಿ ಮಾತನಾಡುತ್ತ ವಾತ್ಸಲ್ಯ ಯೋಜನೆಯಡಿ ವಾತ್ಸಲ್ಯ ಮಿಕ್ಸ್, ಬಟ್ಟೆ, ಪಾತ್ರೆ ಕಿಟ್ ಒಳಗೊಂಡಂತೆ ತಿಂಗಳಿಗೆ ನೀಡಲಾಗುವ ಒಂದು ಸಾವಿರ ರೂ.ಮಾಶಾಸನ ವೃದ್ದಾಪ್ಯದಲ್ಲಿ ನಿರ್ಗತಿಕರಿಗೆ ನೆರವಾಗಲಿದೆ. ಸೂರು ಕಲ್ಪಿಸುವುದು ಧರ್ಮಸ್ಥಳದ ಧರ್ಮಾಧಿಕಾರಿ ಡಾ.ಡಿ.ವೀರೇಂದ್ರ ಹೆಗಡೆರವರ ಮಹದಾಸೆಯಾಗಿರುವುದರಿಂದ ನಾಗಮ್ಮನಿಗೆ ಮನೆ ನಿರ್ಮಿಸಿ ಕೊಡಲಾಗುತ್ತಿದೆ ಎಂದು ಹೇಳಿದರು.ಗ್ರಾಮ ಪಂಚಾಯಿತಿ ಸದಸ್ಯೆ ಮಂಜುಳ, ವಲಯ ಮೇಲ್ವಿಚಾರಕ ಮೋಹನ್, ಜ್ಞಾನವಿಕಾಸ ಸಮನ್ವಯಾಧಿಕಾರಿ ಶಿವಲೀಲಾ ಎಸ್.ಬಾಗೋಡಿ, ಮೇಸ್ತ್ರಿ ವಿಶ್ವನಾಥ್, ಸೇವಾಪ್ರತಿನಿಧಿಗಳು ಈ ಸಂದರ್ಭದಲ್ಲಿದ್ದರು.

### ಜಗಳೂರು ಪಪಂ ಸ್ಥಾನಕ್ಕೆ ಉಪ ಚುನಾವಣೆ

**ದಾವಣಗೆರೆ:** ಜಗಳೂರು ಪಟ್ಟಣ ಪಂಚಾಯಿತಿಯ 9 ನೇ ವಾರ್ಡ್‌ಗೆ ಉಪಚುನಾವಣೆ ನಡೆಸಲು ವೇಳಾಪಟ್ಟಿ ಪ್ರಕಟಿಸಿ ಜಿಲ್ಲಾಧಿಕಾರಿ ಜಿ.ಎಂ. ಗಂಗಾಧರಸ್ವಾಮಿಯವರು ಅಧಿಸೂಚನೆ ಹೊರಡಿಸಿದ್ದಾರೆ. ಹಿಂದುಳಿದ ವರ್ಗ 'ಬ' ಗೆ ಮೀಸಲಿರುತ್ತದೆ. ನಾಮಪತ್ರಗಳನ್ನು ಸಲ್ಲಿಸಲು ನವೆಂಬರ್ 11 ಕೊನೆಯ ದಿನ. ನ.12 ರಂದು ನಾಮಪತ್ರಗಳನು ಪರಿಶೀಲನೆ, ನ.14 ರಂದು ಉಮೇದುವಾರಿಕೆಗಳನ್ನು ಹಿಂತೆಗೆದುಕೊಳ್ಳಲು ಕೊನೆಯ ದಿನವಾಗಿರುತ್ತದೆ.

## ಪ್ರಮುಖ ಸುದ್ದಿ

### ಗುಣಾತ್ಮಕ ಶಿಕ್ಷಣ ನೀಡುವ ಮೂಲಕ ವಿದ್ಯಾರ್ಥಿಗಳ ಭವಿಷ್ಯವನ್ನು ಉಜ್ವಲಗೊಳಿಸಿ : ಇಒ ಶಶಿಧರ

# ಎಚ್‌ಪಿಟಿ ಬಾಲಕಿಯರ ಶಾಲೆಗೆ ಇಒ ದಿಢೀರ್ ಭೇಟಿ

» **ಚಳ್ಳಕೆರೆ**

ವಿದ್ಯಾರ್ಥಿಗಳ ಭವಿಷ್ಯದ ಹಿತದೃಷ್ಠಿಯಿಂದ ಗುಣಾತ್ಮಕ ಶಿಕ್ಷಣವನ್ನು ಬೋಧಿಸುವಲ್ಲಿ ಶಿಕ್ಷಕರು ಹಿಂದೆ ಬೀಳಬಾರದು. ಶಿಕ್ಷಕರು ನೀಡುವ ಶಿಕ್ಷಣದ ಮೇಲೆ ವಿದ್ಯಾರ್ಥಿಗಳ ಭವಿಷ್ಯ ಅವಲಂಬಿತವಾಗಿದೆ. ಈ ಹಿನ್ನೆಲೆಯಲ್ಲಿ ಸರ್ಕಾರ ಶಿಕ್ಷಣದ ವಿಚಾರವನ್ನು ಗಂಭೀರವಾಗಿ ಪರಿಗಣಿಸಿದೆ. ತಾಲ್ಲೂಕು ಮಟ್ಟದ ಅಧಿಕಾರಿಗಳು ಸಹ ಶಿಕ್ಷಣ ಕೇಂದ್ರಗಳಿಗೆ ಭೇಟಿ ನೀಡಿ ಮಾರ್ಗದರ್ಶನ ನೀಡುವಂತೆ ನಿರ್ದೇಶನ ನೀಡಿದ್ದು, ಶಿಕ್ಷಕರ ಮಾರ್ಗದರ್ಶನದಲ್ಲಿ ಉತ್ತಮ ಅಂಕ ಪಡೆದು ವಿದ್ಯಾರ್ಥಿಗಳು ಭವಿಷ್ಯವನ್ನು ರೂಪಿಸಿಕೊಳ್ಳಿ ಎಂದು ತಾಲ್ಲೂಕು ಪಂಚಾಯಿತಿ ಕಾರ್ಯನಿರ್ವಹಣಾಧಿಕಾರಿ ಎಚ್.ಶಶಿಧರ ತಿಳಿಸಿದರು. ಅವರು, ನಗರದ ಹೆಗ್ಗೆರೆತಾಯಮ್ಮತಿಪ್ಪೇಸ್ವಾಮಿ ಸರ್ಕಾರಿ ಬಾಲಕಿಯರ ಪ್ರೌಢಶಾಲೆಗೆ ಸೋಮವಾರ ದಿಢೀರ್ ಭೇಟಿ ನೀಡಿ ಎಸ್‌ಎಸ್‌ಎಲ್‌ಸಿ ವಿದ್ಯಾರ್ಥಿಗಳೊಂದಿಗೆ ಪ್ರಸ್ತುತ ಶೈಕ್ಷಣಿಕ ಸ್ಥಿತಿಗತಿಯ ಬಗ್ಗೆ ಸಮಾಲೋಚನೆ ನಡೆಸಿದರು. ಶಿಕ್ಷಕರು ನೀಡುವ ಬೋಧನೆಯಲ್ಲಿ ಯಾವುದೇ ಸಂದೇಹವಿದ್ದರೂ ಸಂಬಂಧಪಟ್ಟ ವಿದ್ಯಾರ್ಥಿಗಳು ಶಿಕ್ಷಕರೊಂದಿಗೆ ಚರ್ಚಿಸಿ ಬಗೆಹರಿಸಿಕೊಳ್ಳಬೇಕು. ಯಾರೂ ಸಹ ಕಲಿಕೆಯಲ್ಲಿ ಹಿನ್ನಡೆ ಅನುಭವಿಸಬಾರದು. ಇತ್ತೀಚೆಗೆ ತಾನೇ ಎಸ್‌ಎಸ್‌ಎಲ್‌ಸಿ ಪರೀಕ್ಷೆಯಲ್ಲಿ ನಿರೀಕ್ಷಿತ ಫಲಿತಾಂಶ ಲಭ್ಯವಾಗಿಲ್ಲ. ಈ ಬಾರಿ ಎಸ್‌ಎಸ್‌ಎಲ್‌ಸಿಯಲ್ಲಿ ಶೇ.100 ಫಲಿತಾಂಶ ದಾಖಲಿಸಿ ಎಂದರು.



ಮುಖ್ಯ ಶಿಕ್ಷಕ ಎ.ವೀರಣ್ಣ ಮಾತನಾಡಿ, ಶಾಲೆಯ ಎಲ್ಲಾ ಶಿಕ್ಷಕರು ಪ್ರತಿದಿನ 10ನೇ ತರಗತಿ ವಿದ್ಯಾರ್ಥಿಗಳಿಗೆ ವಿಶೇಷ ಕಾರ್ಯಾಗಾರದ ಮೂಲಕ ಶಿಕ್ಷಣ ನೀಡುತ್ತಿದ್ದಾರೆ. ಈಗಾಗಲೇ ಎಲ್ಲಾ ಶಿಕ್ಷಕರಿಗೂ ಸೂಚನೆ ನೀಡಲಾಗಿದ್ದು ಫಲಿತಾಂಶವನ್ನು ಉತ್ತಮ ಪಡಿಸಲು ಪ್ರಾಮಾಣಿಕ ಪ್ರಯತ್ನ ಮುಂದುವರೆದಿದೆ ಎಂದರು. ಅಕ್ಷರ ದಾಸೋಹ ಅಧಿಕಾರಿ ಮಂಜುನಾಥ, ಶಿಕ್ಷಕರಾದ ರಾಜಣ್ಣ, ಪ್ರಾಣೇಶ್, ಉಮಾ, ಹಿರೇಮಠ್, ಪೂರ್ಣಿಮಾ, ಸುಜಾತ ಉಪಸ್ಥಿತರಿದ್ದರು.

**ಫಾಸ್ಟ್ ನ್ಯೂಸ್**

## ನ.14 ರಿಂದ 20 ರವರೆಗೆ ಗ್ರಂಥಾಲಯ ಸಪ್ತಾಹ

» **ಚಿತ್ರದುರ್ಗ**

ಚಿತ್ರದುರ್ಗ ನಗರ ಕೇಂದ್ರ ಗ್ರಂಥಾಲಯದಲ್ಲಿ ಇದೇ ನವೆಂಬರ್ 14 ರಿಂದ 20 ರವರೆಗೆ ರಾಷ್ಟ್ರೀಯ ಗ್ರಂಥಾಲಯ ಸಪ್ತಾಹ ಆಚರಿಸುತ್ತಿದ್ದು, ಇದರ ಅಂಗವಾಗಿ ನವೆಂಬರ್ 11ರಂದು ಚಿತ್ರದುರ್ಗ ನಗರ ವ್ಯಾಪ್ತಿಯಲ್ಲಿ ಮಾತ್ರ ಶಾಲಾ ಹಾಗೂ ಕಾಲೇಜು ವಿದ್ಯಾರ್ಥಿಗಳಿಗಾಗಿ ವಿವಿಧ ಸ್ಪರ್ಧೆ ಆಯೋಜಿಸಲಾಗಿದೆ. ಪ್ರತಿ ಶಾಲಾ ಹಾಗೂ ಕಾಲೇಜುಗಳಿಂದ ಇಬ್ಬರು ವಿದ್ಯಾರ್ಥಿಗಳಂತೆ ಸಂಬಂಧಿಸಿದ ಕ್ಷೇತ್ರ ಶಿಕ್ಷಣಾಧಿಕಾರಿಗಳು ಹಾಗೂ ಉಪನಿರ್ದೇಶಕರು ಪದವಿ ಪೂರ್ವ ಶಿಕ್ಷಣ ಇಲಾಖೆಗೆಈಗಾಗಲೇಪತ್ರರವಾನಿಸಲಾಗಿದೆಹಾಗೂ ಶಾಲಾ ಕಾಲೇಜುಗಳಿಗೆ ಗ್ರಂಥಾಲಯದಿಂದಲೇ ಮುದ್ದಾಂ ಆಗಿ ಪತ್ರ ನೀಡಲಾಗಿದೆ. ಒಂದು ವೇಳೆ ತಲುಪದಿದ್ದಲ್ಲಿ ಶಾಲಾ ಮುಖ್ಯೋಪಾಧ್ಯಾರು ಹಾಗೂಪ್ರಾಂಶುಪಾಲರುಶಾಲಾ–ಕಾಲೇಜುಗಳಿಂದ ಇಬ್ಬರು ವಿದ್ಯಾರ್ಥಿಗಳನ್ನು ನವಂಬರ್ 8 ರಂದು ಸಂಜೆ 5 ಗಂಟೆಯೊಳಗಾಗಿ ನಗರ ಕೇಂದ್ರ ಗ್ರಂಥಾಲಯ ಕಚೇರಿಗೆ ಹೆಸರು ಸಲ್ಲಿಸಲು ಸೂಚಿಸಲಾಗಿದೆ. ಸ್ಪರ್ಧೆಯ ವಿವರ: ನವಂಬರ್ 11ರಂದು ಬೆಳಿಗ್ಗೆ 11 ರಿಂದ 12 ಗಂಟೆಯವರೆಗೆ "ಐತಿಹಾಸಿಕ ಚಿತ್ರದುರ್ಗ ಕಲ್ಲಿನ ಕೋಟೆಗೆ ಸಂಬಂಧಿಸಿದ ವಿಷಯದ ಕುರಿತು ಸ್ಥಳದಲ್ಲೆ ಚಿತ್ರ ಬರೆಯುವ ಸ್ಪರ್ಧೆವನ್ನು ಪ್ರಾಥಮಿಕ ಮತ್ತು ಹಿರಿಯ ಪ್ರಾಥಮಿಕ ವಿಭಾಗದ ವಿದ್ಯಾರ್ಥಿಗಳಿಗೆ ಆಯೋಜಿಸಲಾಗಿದೆ. ಅಂದು ಮಧ್ಯಾಹ್ನ 3 ರಿಂದ 4 ರವರಗೆ ಪ್ರೌಢಶಾಲಾ ವಿದ್ಯಾರ್ಥಿಗಳಿಗೆ "ಗ್ರಂಥಾಲಯದ ಮಹತ್ವ" ಕುರಿತು ಪ್ರಬಂಧ ಸ್ಪರ್ಧೆ ನಡೆಯಲಿದೆ. ಅಂದು ಸಂಜೆ 4 ರಿಂದ 5 ರವರೆಗೆ ಪ್ರಥಮ ಮತ್ತು ದ್ವಿತೀಯ ಪಿಯು ವಿದ್ಯಾರ್ಥಿಗಳಿಗೆ " ತಾ.ರಾ.ಸು ಜೀವನ ಚರಿತ್ರೆ" ಕುರಿತು ಪ್ರಬಂಧ ಸ್ಪರ್ಧೆ ನಡೆಯಲಿದೆ. ಈ ಎಲ್ಲಾ ಸ್ಪರ್ಧೆಗಳಿಗೆ 1 ಗಂಟೆ ಅವಧಿ ನಿಗಧಿಪಡಿಸಲಾಗಿದೆ ಎಂದು ಚಿತ್ರದುರ್ಗ ನಗರ ಕೇಂದ್ರ ಗ್ರಂಥಾಲಯದ ಮುಖ್ಯ ಗ್ರಂಥಾಲಯಾಧಿಕಾರಿಗಳು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ನಗರದ ಖಾಲಿ ನಿವೇಶನ ಸ್ವಚ್ಛಗೊಳಿಸಿ, ನಾಮಫಲಕ ಅಳವಡಿಸಿ: ಸುಮಿತ ರಘು

» **ಚಿತ್ರದುರ್ಗ**

ನಗರದ ಖಾಲಿ ನಿವೇಶನಗಳಲ್ಲಿ ಪೊದೆಯಂತೆ ಗಿಡ ಗಂಟೆಗಳು ಬೆಳೆದಿರುವುದರಿಂದ ನಗರದ ಸೌಂದರ್ಯ ಹಾಳಾಗುತ್ತಿದೆಯಲ್ಲದೆ. ವಿಷ ಜಂತುಗಳು, ಕೆಟ್ಟ ಹುಳುಗಳು ಸೇರಿಕೊಳ್ಳುತ್ತಿರುವ ಕಾರಣಕ್ಕಾಗಿ ಮಾಲೀಕರುಗಳು ತಮ್ಮ ತಮ್ಮ ನಿವೇಶನಗಳಲ್ಲಿಬೆಳೆದಿರುವಗಿಡಪೊದೆಗಳನ್ನುಇನ್ನು ಹದಿನೈದು ದಿನಗಳಲ್ಲಿ ತೆಗೆಸಿ ಸ್ವಚ್ಚಗೊಳಿಸಿಕೊಂಡು ಕಾಂಪೌಂಡ್ ನಿರ್ಮಿಸಿ ಮಾಲೀಕರ ಹೆಸರು, ವಿಳಾಸ, ಖಾತಾ/ಅಸೆಸ್‌ಮೆಂಟ್ ಸಂಖ್ಯೆ, ಅಳತೆ, ಪಿ.ಐ.ಡಿ.ನಂ. ಹಾಗೂ ಮೊಬೈಲ್ ಸಂಖ್ಯೆಯ ವಿವರಗಳನ್ನೊಳಗೊಂಡ ನಾಮಫಲಕ ಅಳವಡಿಸಿ ಬಂದೋಬಸ್ತ್ ಮಾಡಿಕೊಳ್ಳಬೇಕೆಂದು ನಗರಸಭೆ ಅಧ್ಯಕ್ಷೆ ಸುಮಿತ ಬಿ.ಎನ್.ಈರುಳ್ಳಿ ರಘು ಮನವಿ ಮಾಡಿದ್ದಾರೆ.ಒಂದು ವೇಳೆ ಮಾಲೀಕರುಗಳು ತಮ್ಮ ನಿವೇಶನಗಳನ್ನು ಸ್ವಚ್ಚಗೊಳಿಸಿಕೊಳ್ಳದಿದ್ದರೆ ನಗರಸಭೆಯಿಂದ ಗಿಡ ಗಂಟೆಗಳನ್ನು ತೆಗೆಸಿ ಅದಕ್ಕೆ ತಗಲುವ ವೆಚ್ಚವನ್ನು ಕೆ.ಎಂ.ಬುಕ್‌ನಲ್ಲಿ ಷರಾ ಬರೆದು ಮಾಲೀಕರುಗಳಿಂದ ವಸೂಲಿ ಮಾಡಲಾಗುವುದಲ್ಲದೆ ದಂಡ ವಿಧಿಸಲಾಗುವುದು. ಇದಕ್ಕೆನಿವೇಶನಗಳಮಾಲೀಕರುಗಳುಸ್ಪಂದಿಸದಿದ್ದರೆ ಖಾತಾ, ಇ–ಸ್ವತ್ತುಗಳನ್ನು ನೀಡಲಾಗುವುದಿಲ್ಲ ಎಂದು ಅಧ್ಯಕ್ಷೆ ಸುಮಿತ ಬಿ.ಎನ್.ಈರುಳ್ಳಿ ರಘು ಎಚ್ಚರಿಸಿದ್ದಾರೆ.

## ಪಶುಸಂಗೋಪನಾ ಚಟುವಟಿಕೆಗಳ ತರಬೇತಿ

» **ದಾವಣಗೆರೆ**

ದಾವಣಗೆರೆ ಪಶುಪಾಲನಾ ಮತ್ತು ಪಶುವೈದ್ಯಕೀಯ ತರಬೇತಿ ಕೇಂದ್ರದಲ್ಲಿ ರೈತರಿಗೆ ಪಶುಸಂಗೋಪನಾಚಟುವಟಿಕೆಗಳತರಬೇತಿಯನ್ನು ಆಯೋಜಿಸಲಾಗಿದೆ. ನವೆಂಬರ್ 5, 6 ಮತ್ತು 29,30 ರಂದು ಆಧುನಿಕ ಹೈನುಗಾರಿಕೆ ತರಬೇತಿ, ನ.11 ಮತ್ತು 12 ರಂದು ಕುರಿ ಮತ್ತು ಮೇಕೆ ಸಾಕಾಣಿಕೆ ತರಬೇತಿ, ನ.15 ಮತ್ತು 16 ರಂದು ಕೋಳಿ ಸಾಕಾಣಿಕೆ ತರಬೇತಿಯನ್ನು ನೀಡಲಾಗುವುದು. ಆಸಕ್ತ ರೈತರು ಆಧಾರ್ ಕಾರ್ಡ್ ಜೆರಾಕ್ಸ್, 2 ಪಾಸ್ ಪೋರ್ಟ್ ಸೈಜ್ ಪೋಟೋ ಮತ್ತು ಪರಿಶಿಷ್ಟ ಜಾತಿ ಮತ್ತು ಪರಿಶಿಷ್ಟ ಪಂಗಡದವರು ಜಾತಿ ಪ್ರಮಾಣ ಪತ್ರದ ಜೆರಾಕ್ಸ್ ಪ್ರತಿಯೊಂದಿಗೆ ಹಾಜರಾಗಬೇಕು. ತರಬೇತಿ ಕಾರ್ಯಕ್ರಮಕ್ಕೆ ಯಾವುದೇ ಪ್ರೋತ್ಸಾಹಧನ ಮತ್ತು ಭತ್ಯೆಗಳನ್ನು ನೀಡಲಾಗುವುದಿಲ್ಲ. ಹೆಚ್ಚಿನ ಮಾಹಿತಿಗಾಗಿ ಪಶುಪಾಲನಾ ಮತ್ತು ಪಶುವೈದ್ಯಕೀಯ ತರಬೇತಿ ಕೇಂದ್ರ, ದಾವಣಗೆರೆ ಕಚೇರಿ ದೂ.ಸಂ: 08192–233787 ಸಂಪರ್ಕಿಸಿ ಮಾಹಿತಿ ಪಡೆದುಕೊಳ್ಳಬಹುದು ಎಂದು ಪಶುವೈದ್ಯಾಧಿಕಾರಿಗಳು ತಿಳಿಸಿದ್ದಾರೆ.

## ಕಲಿಕಾ ಕಾರ್ಯಾಗಾರ

» **ದಾವಣಗೆರೆ**

ವೃತ್ತಿ ರಂಗಭೂಮಿ, ರಂಗಾಯಣ ದಾವಣಗೆರೆ ವತಿಯಿಂದ ನವಂಬರ್ 7 ರಂದು ಸಂಜೆ 6 ಗಂಟೆಗೆ ನಗರದ ಶ್ರೀ ಶಿವಯೋಗಮಂದಿರ, ಜಯದೇವ ಸರ್ಕಲ್‌ನಲ್ಲಿ ರಂಗ ಸಂಗೀತ, ವೃತ್ತಿರಂಗಗೀತೆಗಳ ಕಲಿಕಾ ಕಾರ್ಯಾಗಾರದ ಸಮಾರೋಪ ಮತ್ತು ಅಭಿನಯ ಸಂಗೀತ ಪ್ರದರ್ಶನವನ್ನು ಆಯೋಜಿಸಲಾಗಿದೆ.

# ಬೆಂಬಲ ಬೆಲೆಗೆ ಶೇಂಗಾ ಖರೀದಿ: ಷರತ್ತಿಗೆ ವಿರೋಧ

» **ಚಳ್ಳಕೆರೆ**

ಕೇಂದ್ರ ಸರ್ಕಾರ ಶೇಂಗಾ ಬೆಳೆಗೆ ಬೆಂಬಲ ಬೆಲೆ ಘೋಷಿಸಿದ ಹಿನ್ನೆಲೆಯಲ್ಲಿ ಬರುವ ಗುರುವಾರದಿಂದ ಎಪಿಎಂಸಿ ಯಾರ್ಡ್ ನಲ್ಲಿ ಪ್ರಾರಂಭಗೊಳ್ಳುತ್ತಿರುವ ಶೇಂಗಾ ಖರೀದಿ ಕೇಂದ್ರಕ್ಕೆ ಇಂದು ನಡೆದ ಸಭೆಯಲ್ಲಿ ರೈತರು ವಿರೋಧ ವ್ಯಕ್ತಪಡಿಸಿದರು.

ಖರೀದಿ ಕೇಂದ್ರದಲ್ಲಿ ಶೇಂಗಾ 70ರಷ್ಟು ಗುಣಮಟ್ಟದ ಶೇಂಗಾವನ್ನು ಮಾತ್ರ ಖರೀದಿಸುವುದು, ಪಹಣಿ ಇರುವವರೇ ಕೇಂದ್ರಕ್ಕೆ ಬಂದು ಹೆಬ್ಬೆರಳು ಗುರುತು ನೀಡಬೇಕು, ನಗರದ ಎಪಿಎಂಸಿ ಅಂಗಡಿಯಲ್ಲಿ ಬಿಳಿಚೀಟಿಯಲ್ಲಿ ಬಿಲ್ ನೀಡುತ್ತಾರೆ.

ಜಿಎಸ್ಟಿ ಬಿಲ್ ನೀಡುತ್ತಿಲ್ಲ ಇದರಿಂದ ನಮಗೆ ಬೆಂಬಲಬೆಲೆ ಪಡೆಯಲು ಸಾಧ್ಯವಾಗದು, ಕರ್ನಾಟಕ ಸಹಕಾರಿ ಎಣ್ಣೆಬೀಜ ಬೆಳೆಗಾರರ ಮಹಾಮಂಡಳಿ ನಿಯಮಿತ(ಕೆಓಎಫ್) ವತಿಯಿಂದ ಶೇಂಗಾ ಖರೀದಿಸುತ್ತಾರೆ.ಆದರೆ, ಹಣ ಯಾವಾಗ ಬರುತ್ತದೆ ಎಂಬುವುದೇ ಗೊತ್ತಿಲ್ಲ ಎಂದು ಆರೋಪಿಸಿದರು.

ಈ ಸಂದರ್ಭದಲ್ಲಿ ಮಾತನಾಡಿದ





ಪ್ರಭಾರ ಕಾರ್ಯದರ್ಶಿ ಸುರೇಶ್, ಕಳೆದ ಕೆಲವು ವರ್ಷಗಳಿಂದ ಎಪಿಎಂಸಿ ಕಚೇರಿಯಲ್ಲೇ ಕೆಓಎಫ್ ಎ□□ಎಕ್ಯೂ ಗುಣಮಟ್ಟದ ಶೇಂಗಾ ಉತ್ಪದಾನವನ್ನು ಖರೀದಿ ಕೇಂದ್ರವನ್ನು ಪ್ರಾರಂಭಮಾಡಲು ಸರ್ಕಾರ ನಿರ್ದೇಶಕ ನೀಡಿದೆ ಎಂದರು.

ರೈತ ಸಂಘದ ಅಧ್ಯಕ್ಷ ಚಿಕ್ಕಣ್ಣ ಮಾತನಾಡಿ, ಕೇಂದ್ರ ಹಾಗೂ ರಾಜ್ಯ ಸರ್ಕಾರಗಳು ಕೆಓಎ□□ ಮೂಲಕ ಶೇ.70ರಷ್ಟು ಗುಣಮಟ್ಟದ ಶೇಂಗಾವನ್ನು ಮಾತ್ರ ಖರೀದಿರುತ್ತಾರೆ.

ಇದರಿಂದರೈತರಿಗೆಹೆಚ್ಚುನಷ್ಟವಾಗುತ್ತದೆ. ಕಾರಣ, ಪ್ರಕೃತಿ ಮುನಿಸಿನಿಂದ ಶೇಂಗಾ ಬೆಳೆ ಜೊಳ್ಳಾಗಿದೆ. ಈ ನಿಟ್ಟಿನಲ್ಲಿ ಕೆಓಎಫ್ ಎಚ್ಚರಿಕೆ ಹೆಜ್ಜೆ ಇಡಬೇಕೆಂದರು.

ರೈತ ಮುಖಂಡ ಚಟ್ಟೆಕೆಂಬದ ಸಿ.ಜಿ.ತಿಪ್ಪೇಸ್ವಾಮಿ ಮಾತನಾಡಿ, ರೈತರು ಬೆಳೆಇಲ್ಲದೆ ಚಿಂತನೆಗೆ ಒಳಗಾಗಿದ್ದಾರೆ. ಕೆಲವು ರೈತರು ಮಾತ್ರ ಅಲ್ಪಮಟ್ಟದ ಬೆಳೆ ಬೆಳೆದಿದ್ದು ಅದನ್ನು ಇಲ್ಲಿನ ಮಾರುಕಟ್ಟೆಗೆ ತಂದರೆ ಬಿಳಿಚೀಟಿ ನೀಡಿ ರೈತರನ್ನು ವಂಚಿಸಲಾಗುತ್ತಿದೆ. ಕೆಓಎಫ್ ಶೇಂಗಾ ಖರೀದಿಸಿದರೆ ಹಣ ಯಾವಾಗ ನೀಡುತ್ತಾರೆಂಬುವುದು ಗ್ಯಾರಂಟಿ ಇಲ್ಲವೆಂದು ಆರೋಪಿಸಿದರು.

ಕೆಓಎ□□ನ ಜಿಲ್ಲಾ ವ್ಯವಸ್ಥಾಪಕ ಹನುಮಂತನಾಯ್ಕ ಮಾತನಾಡಿ, ಸರ್ಕಾರದ ನಿರ್ದೇಶಕದಂತೆ ಈ ಗುರುವಾದ ಕೇಂದ್ರ ಪ್ರಾರಂಭಗೊಳ್ಳಲಿದೆ. ರೈತರ ಸಮಸ್ಯೆಯನ್ನು ತಹಶೀಲ್ದಾರ್, ಜಿಲ್ಲಾಧಿಕಾರಿಗಳಿಗೆ ಮನವಿ ಮಾಡಿಕೊಳ್ಳಿ. ಕೆಓಎ□□ಗೆ ರೈತ ಶೇಂಗಾ ನೀಡಿದ ಕೆಲವೇ ದಿನಗಳಲ್ಲಿ ರೈತ ಖಾತೆಗೆ ಹಣ ಜಮಾವಾಗುತ್ತದೆ. ಖಾತೆ ಹೊಂದಿದ ರೈತರು ಮಾತ್ರ ಇದರ ಸದುಪಯೋಗವನ್ನು ಪಡೆದುಕೊಳ್ಳಬಹುದಾಗಿದೆ ಎಂದರು.

ಕೆಓಎಫ್ ಜಿಲ್ಲಾ ನಿರ್ದೇಶಕ ರಾಮಜೋಗಿಹಳ್ಳಿದೇವರಾಜರೆಡ್ಡಿ ಮಾತನಾಡಿ, ಕೇಂದ್ರ ಸರ್ಕಾರ ಮಹತ್ತದ ಯೋಜನೆಗಳಲ್ಲಿ ಇದು ಒಂದಾಗಿದೆ. ರೈತರು ಯಾವುದೇ ದಲ್ಲಾಲಿಗಳ ಕೈಗೆ ಸಿಗದೆ ತಮ್ಮ ಉತ್ಪಾದನೆಯನ್ನು ನೇರವಾಗಿ ಕೆಓಎ□□ಗೆ ನೀಡಿ ಹೆಚ್ಚಿನ ಆರ್ಥಿಕ ಲಾಭಪಡೆಯಲಿ ಎಂಬುವುದು ಇದರ ಉದ್ದೇಶವಾಗಿದೆ ಎಂದರು.

ಕೆಓಎಫ್ ಅಧಿಕಾರಿ ಗುರುರಾಜ್, ರೈತರಾದನಾಗೇಂದ್ರಪ್ಪ,ನವೀ□□ಕುಮಾರ್, ಭಾಷ, ಜಂಪಣ್ಣ, ಅಣ್ಣಪ್ಪ, ಪ್ರಕಾಶ್, ಹೊನ್ನೂರಪ್ಪ, ಪರಮೇಶ್ವರಪ್ಪ, ರಾಜಣ್ಣ, ಶಾಂತಣ್ಣ, ಶರಣಪ್ಪ, ಕೆಂಚಣ್ಣ, ಓಬಳೇಶ್ ಮುಂತಾದವರು ಉಪಸ್ಥಿತರಿದ್ದರು.

# ಯೋಗ ತರಬೇತಿ ಕಾರ್ಯಾಗಾರಕ್ಕೆ ಚಾಲನೆ



» **ಚಿತ್ರದುರ್ಗ**

ಕನ್ನಡ ನಾಡಿಗೆ ಕೀರ್ತಿ ತಂದ ಸಾಧಕರು ಗ್ರಾಮೀಣ ಪ್ರದೇಶದಿಂದ ಬಂದಿರುವ ಸಾಹಿತಿಗಳು, ಕವಿಗಳು ಮತ್ತು ಕಲಾವಿದರು. ಕನ್ನಡನಾಡಿನ ಬಹುತೇಕ ಸಂತರು, ದಾರ್ಶನಿಕರು ನಮಗೆ ಆದರ್ಶರಾಗಬೇಕು. ಭವಿಷ್ಯದಲ್ಲಿ ಉಜ್ವಲ ಭವಿಷ್ಯದ ನಿರೀಕ್ಷೆಯಲ್ಲಿರುವ ಇಂದಿನ ಮಕ್ಕಳು ಉತ್ತಮ ಸಂಸ್ಕೃತಿಯ ಕರ್ತವ್ಯವನ್ನು ಮರೆತು ಅನಾಗರೀಕರಂತೆ ಜೀವಿಸುತ್ತಿರುವುದು ಆತಂಕ ತಂದಿದೆ ಎಂದು ಪ್ರಭಾರೆ ಮುಖ್ಯಶಿಕ್ಷಕ ಎಸ್.ಬಿ.ಸಣ್ಣತಿಪ್ಪಯ್ಯ ಅಭಿಪ್ರಾಯಪಟ್ಟರು.

ವಿಜಾಪುರ ಗ್ರಾಮದ ಚಿತ್ರದುರ್ಗ ವಿದ್ಯಾಸಂಸ್ಥೆಯ ಶಬರ ಶಂಕರ ವಸತಿ ಸಾಮೂಹಿಕ ಪ್ರೌಢಶಾಲೆಯ ಆವರಣದಲ್ಲಿ ರಂಗಸೌರಭ ಕಲಾ ಸಂಘ ಮತ್ತು ಕನ್ನಡ ಮತ್ತು ಸಂಸ್ಕೃತಿ ನಿರ್ದೇಶನಾಲಯ ಬೆಂಗಳೂರು ಸಂಯುಕ್ತ ಆಶ್ರಯದಲ್ಲಿ ಏರ್ಪಡಿಸಿದ್ದ ಕರ್ನಾಟಕ ಸಂಭ್ರಮ –50 ಹೆಸರಾಯಿತು ಕರ್ನಾಟಕ ಉಸಿರಾಗಲಿ ಕನ್ನಡ ಎಂಬ ಧ್ಯೇಯ ವಾಕ್ಯದೊಂದಿಗೆ 69ನೇ ಕನ್ನಡ ರಾಜ್ಯೋತ್ಸವ ಪ್ರಯುಕ್ತ ನಾಡಗೀತೆ, ರಾಷ್ಟ್ರಗೀತೆ, ರೈತಗೀತೆಗಳನ್ನು ಪ್ರಯೋಗಿಕ ತರಬೇತಿ, ಕವಿಕಾವ್ಯ ಪರಿಚಯ ಹಾಗೂ ಕನ್ನಡ ಗೀತಗಾಯನದೊಂದಿಗೆ ಯೋಗ ತರಬೇತಿ ಕಾರ್ಯಾಗಾರ ಕಾರ್ಯಕ್ರಮವನ್ನು ಉದ್ಘಾಟಿಸಿ ಅವರು ಮಾತನಾಡಿದರು.

ಮಕ್ಕಳು ಚೆನ್ನಾಗಿ ಓದಬೇಕು. ಪುಸ್ತಕಗಳು ಸಮಾಜದಲ್ಲಿ ತಲೆ ಎತ್ತುವಂತೆ ಮಾಡುತ್ತವೆ. ಆದರೆ ಮೊಬೈಲ್‌ಗಳು ತಲೆ ತಗ್ಗಿಸುವಂತೆ ಮಾಡುತ್ತವೆ. ವಾಸ್ತವದ ಸತ್ಯ ಸಂಗತಿಯನ್ನು ಅರಿತು ಊರಿಗೆ, ದೇಶಕ್ಕೆ ಮಾದರಿಯಾಗುವ ಸಾಧನೆಯನ್ನು ಪ್ರತಿಯೊಬ್ಬರೂ ನಿರೀಕ್ಷೆಯಲ್ಲಿರುತ್ತಾರೆ. ಸಾಹಿತ್ಯ ಲೋಕಕ್ಕೆ ಸಾಹಿತಿಗಳ ಕೊಡುಗೆ ಅಪಾರವಾದುದು. ದುಶ್ಚಟಗಳಿಗೆ ಬಲಿಯಾಗದೆ, ಸಮಾಜಕ್ಕೆ ಮಾದರಿಯಾಗುವ ರೀತಿಯಲ್ಲಿ ಬದುಕಬೇಕು ಎಂದರು.ಹಿರಿಯ ಶಿಕ್ಷಕರಾದ ಎಂ.ಎಸ್. ಗೋವಿಂದರೆಡ್ಡಿ ಅಧ್ಯಕ್ಷತೆ ವಹಿಸಿ ಮಾತನಾಡಿದ ಅವರು ಬೇರೆ ಭಾಷೆಗಳನ್ನು ಕಲಿಯಬಾರದು ಅಂತಲ್ಲ ಕಲಿಯಿರಿ ಆದರೆ ಮಾತೃಭಾಷೆಗೆ ಮೊದಲ ಪ್ರಾಶಸ್ತ್ಯವನ್ನು ಕೊಡಬೇಕು. ವ್ಯಾವಹಾರಿಕವಾಗಿ ಬೇರೆ ಭಾಷೆಗಳು ಸಹಕಾರಿ ಆಗಿವೆ, ಆದರೆ ಕನ್ನಡ ಭಾಷೆ ಮಾತ್ರ ನಮ್ಮ ಸಂಸ್ಕೃತಿ, ಆಚಾರ ವಿಚಾರಗಳನ್ನು ಉಳಿಸುತ್ತದೆ. ಇದರಿಂದ ಮನಸ್ಸಿಗೂ, ಮನೆತನಕ್ಕೂ ಹಾಗೂ ಸಮಾಜಕ್ಕೂ ಕೀರ್ತಿ ತರುತ್ತದೆ ಎಂದರು.





ರಂಗನಿರ್ದೇಶಕ ಕೆಪಿಎಂ.ಗಣೇಶಯ್ಯ ನಾಡಗೀತೆ, ರಾಷ್ಟ್ರಗೀತೆ, ರೈತಗೀತೆಗಳನ್ನು ವಿದ್ಯಾರ್ಥಿಗಳಿಗೆ ಪ್ರಾಯೋಗಿಕವಾಗಿ ಹೇಳಿಕೊಟ್ಟರು. ಯೋಗ ಚಿಕಿತ್ಸಕ ಎಂ.ಬಿ.ಮುರುಳಿ ಕನ್ನಡ ಗೀತಗಾಯನದೊಂದಿಗೆ ವಿದ್ಯಾರ್ಥಿಗಳಿಗೂ, ಶಿಕ್ಷಕರಿಗೂ ಯೋಗ ತರಬೇತಿ ನೀಡಿದರು. ಪ್ರಶಿಕ್ಷಣಾರ್ಥಿ ಕು. ಎಂ.ಲಕ್ಷ್ಮೀ ತ.ರಾಸು ರವರ ಕವಿಕಾವ್ಯ ಪರಿಚಯ ಮಾಡಿದರು. ಶಿಕ್ಷಕರಾದ ಬಿಂದುಶ್ರೀ, ವಿಜ್ಞಾನ ಶಿಕ್ಷಕಿ ಎಸ್.ಕಾಂಚನ, ಎಚ್. ಚಂದ್ರಮ್ಮ, ಗಣಿತ ಶಿಕ್ಷಕ ಸಿದ್ದಯ್ಯ, ರಾಘವೇಂದ್ರ ಶಿಕ್ಷಣ ಮಹಾವಿದ್ಯಾಲಯದ ಉಪನ್ಯಾಸಕ ಈ.ಮಹಾಂತೇಶ, ಕಛೇರಿ ಅಧೀಕ್ಷಕ ಸಂಜಯ್, ಪ್ರಶಿಕ್ಷಣಾರ್ಥಿಗಳಾದ ರವಿ, ಪೂಜಾ, ಹೀನಾ ಮುಂತಾದವರು ಉಪಸ್ಥಿತರಿದ್ದರು. ವಿದ್ಯಾರ್ಥಿನಿ ಕೆ.ಪಿ.ಲಾವಣ್ಯ ಪ್ರಾರ್ಥಿಸಿದರು. ಸಣ್ಣಪಾಲಯ್ಯ ವಂದಿಸಿದರು. ಜಿ.ಎನ್.ದಿವ್ಯ ನಿರೂಪಿಸಿದರು.

## ನಾಡು ನುಡಿಯ ಬಗ್ಗೆ ಗೌರವ ಹೆಚ್ಚಾಗಲಿ: ಬಸವರಾಜನ್ ಕರೆ

» **ಹೊಳಲ್ಕೆರೆ**

ಕನ್ನಡ ನಾಡು ಮತ್ತು ನುಡಿಯ ಬಗೆಗಿನ ಗೌರವ ಹೆಚ್ಚಾದಾಗ ಮಾತ್ರ ನಮ್ಮ ಆಚರಣೆಗೆ ಗೌರವ ಬರುತ್ತದೆ ಎಂದು ಮಲ್ಲಾಡಿಹಳ್ಳಿ



ಅನಾಥ ಸೇವಾಶ್ರಮದ ಕಾರ್ಯದರ್ಶಿ ಎಸ್.ಕೆ. ಬಸವರಾಜನ್ ಹೇಳಿದರು.

ತಾಲೂಕಿನ ಮಲ್ಲಾಡಿಹಳ್ಳಿ ಅನಾಥ ಸೇವಾಶ್ರಮದಲ್ಲಿ ನಡೆದ ಕನ್ನಡ ರಾಜೋತ್ಸವ ಕಾರ್ಯಕ್ರಮದಲ್ಲಿ ಅಧ್ಯಕ್ಷತೆ ವಹಿಸಿ ಅವರು ಮಾತನಾಡಿ, ಕನ್ನಡ ನಮ್ಮ ವ್ಯವಹಾರಿಕ ಭಾಷೆ ಆಗುವವರೆಗೂ ನಮ್ಮ ಭಾಷೆಯ ಬಗೆಗಿನ ಆತಂಕ ಕಡಿಮೆಯಾಗುವುದಿಲ್ಲ. ಕನ್ನಡಿಗರಾದನಾವುಗಳುಕನ್ನಡಭಾಷೆಯನ್ನು ನಿರರ್ಗಳವಾಗಿ ಮಾತನಾಡುವುದು ಮತ್ತು ಅದರ ಸಾಹಿತ್ಯವನ್ನು ಓದುವುದು, ಹಾಗೆಯೇ ಅದರ ಬಗ್ಗೆ ಹೆಮ್ಮೆ ಬರುವಂತೆ ನಡೆದುಕೊಂಡಾಗ ಮಾತ್ರ ರಾಜ್ಯೋತ್ಸವ ಆಚರಣೆಗೆ ಅರ್ಥ ಬರುತ್ತದೆ. ಈ ನಿಟ್ಟಿನಲ್ಲಿ ನಾವುಗಳು ನುಡಿ ಹಾಗೂ ಸಾಹಿತ್ಯದ ಕೃಷಿ ಮಾಡುವ ಅಗತ್ಯವಿದೆ ಎಂದರು. ಕನ್ನಡ ಭಾಷಾ ಉಪನ್ಯಾಸಕ ಜಿ.ಎಸ್. ಶಿವಲಿಂಗಪ್ಪಮಾತನಾಡಿ, ಪ್ರಪಂಚದಾದ್ಯಂತಕನ್ನಡ ಭಾಷೆ, ನೆಲ ಮತ್ತು ಸಂಸ್ಕೃತಿಗೆ ಹಲವಾರುಸಾಹಿತಿಗಳು, ಹೋರಾಟಗಾರರು ಶ್ರಮಿಸಿದ್ದು, ಅವರ ಶ್ರಮದ ಫಲವಾಗಿ ನಾವುಗಳುಇಂದುಆಚರಣೆ ಮಾಡುತ್ತಿದ್ದೇವೆ. ಆದರೆ ನಾವುಗಳು ಅವರ ಶ್ರಮ ವ್ಯರ್ಥವಾಗಲು ಅವಕಾಶ ನೀಡದೆ ಭಾಷೆಯ ಮತ್ತು ಈ ನಾಡಿನ ಉಳುವಿಗಾಗಿ ಸದಾ ಸಕ್ರಿಯರಾಗಿ ಇರಬೇಕಾಗಿದೆ ಎಂದರು.ಕಾರ್ಯಕ್ರಮದಲ್ಲಿ ರಾಷ್ಟ್ರ ಗೀತೆ, ನಾಡ ಗೀತೆ ಹಾಗೂ ವಂದೇ ಮಾತರಂ ಗೀತೆಗಳನ್ನು ಸುಶ್ರಾವ್ಯವಾಗಿ ಮಕ್ಕಳು ಹೇಳಿದರು. ಎಂ.ಜಿ.ರಾಮದಾಸ್, ಪಿ.ಕೆ. ರಾಜಪ್ಪ, ಕೆಂಗುಂಟೆ ಜಯಣ್ಣ, ಎಲ್ಲಾ ಶಾಲಾ ಕಾಲೇಜುಗಳ ಮುಖ್ಯಸ್ಥರು, ಅಧ್ಯಾಪಕರು ಹಾಗೂ ಉಪಸ್ಥಿತರಿದ್ದರು. ಸಿಬ್ಬಂದಿವರ್ಗದವರು. ಕಾರ್ಯಕ್ರಮವನ್ನು ಪ್ರೌಢಶಾಲೆಯ ಶಿಕ್ಷಕ ಎಚ್.ಎಂ. ಸೋಮಶೇಖರ್‌ಸ್ವಾಗತಿಸಿ, ಜಿ. ಚಂದ್ರಪ್ಪ ನಿರೂಪಿಸಿ, ಎಸ್.ಎಂ. ಗೌಡ ವಂದಿಸಿದರು. ಇದೇ ಸಂದರ್ಭದಲ್ಲಿ ವಿದ್ಯಾರ್ಥಿನಿಯರಿಂದ ನೃತ್ಯ ಪ್ರದರ್ಶನ ನಡೆಯಲ್ಪಟ್ಟಿತು.

## ಬಿಜೆಪಿಯವರು ನಿಜವಾಗಲೂ ದಡ್ಡರು:ಡಿಕೆಶಿ ಲೇವಡಿ

» **ಚನ್ನಪಟ್ಟಣ**

ಕೇವಲ ಎರಡು ಕ್ಷೇತ್ರದಲ್ಲಿ ಜೆಡಿಎಸ್ ಗೆದ್ದ ಮಾತ್ರಕ್ಕೆ ಕುಮಾರಸ್ವಾಮಿಗೆ ಕೇಂದ್ರದಲ್ಲಿ ಮಂತ್ರಿ ಸ್ಥಾನ ನೀಡಿರುವ ಬಿಜೆಪಿಯವರು ನಿಜವಾಗಲೂ ದಡ್ಡರೇ ಎಂದು ಡಿಸಿಎಂ ಡಿ.ಕೆ.ಶಿವಕುಮಾರ್ ಲೇವಡಿ ಮಾಡಿದರು.

ಚನ್ನಪಟ್ಟಣ ವಿಧಾನಸಭಾ ಕ್ಷೇತ್ರದ ಎಲೆ ತೋಟದ ಹಳ್ಳಿ, ಅಕ್ಕೂರಿನಲ್ಲಿ ಪ್ರಚಾರ ಸಭೆಯಲ್ಲಿ ಮಾತನಾಡಿ, 18 ಸೀಟು ಇಟ್ಟುಕೊಂಡು ಸರ್ಕಾರ ಮಾಡಲು ಸಾಧ್ಯವೇ?ಬಿಜೆಪಿಯವರು ದಡ್ಡರು, ಕೇವಲ ಎರಡು ಕ್ಷೇತ್ರ ಗೆದ್ದಿರುವುದಕ್ಕೆ ಕೇಂದ್ರದಲ್ಲಿ ಮಂತ್ರಿ ಮಾಡಿದ್ದಾರೆ. ನಾವಾಗಿದ್ದರೆ ಅವರನ್ನು ಹತ್ತಿರಕ್ಕೂ ಸೇರಿಸುತ್ತಿರಲಿಲ್ಲ. ಈ ಹಿಂದೆ ಅವರ ಸಹವಾಸ ಮಾಡಿ ಅನುಭವಿಸಿದ್ದು ಸಾಕಾಗಿದೆ ಎಂದು ಮಾತಿನಲ್ಲೇ ಡಿಕೆಶಿ ಗುಮ್ಮಿದರು.ಇನ್ನು ನಮ್ಮ ಅಭ್ಯರ್ಥಿ ಯೋಗೇಶ್ವರ್ ಒಬ್ಬರೇ ಈ ಕ್ಷೇತ್ರದ ಜನರ ಸೇವೆ ಮಾಡಲ್ಲ. ನಾನು ಸೇರಿದಂತೆ, ಸಿಎಂ ಸಿದ್ದರಾಮಯ್ಯ ಅವರಾದಿಯಾಗಿ ಎಲ್ಲಾ ಸಚಿವರು ಸೇವೆ ಮಾಡುತ್ತೇವೆ. ಕುಮಾರಸ್ವಾಮಿ ದುಡ್ಡು ಕೊಡುತ್ತಾರಂತೆ. ಅವರ ದುಡ್ಡನ್ನು ನೀವು ಬೇಡ ಎನ್ನಬೇಡಿ.

## ಚಂದ್ರಕಲಾ ನಿಧನ

**ಹೊಸದುರ್ಗ:** ತಾಲೂಕು ಶ್ರೀ ವೀರ ಮಡಿವಾಳ ಮಾಚಿದೇವ ಸಂಘದ ಕಾರ್ಯದರ್ಶಿ ರಮೇಶ್ ಅವರ ತಾಯಿ ಶ್ರೀಮತಿ ಚಂದ್ರಕಲಾ (65) ಅವರು ಹೃದಯಾಘಾತದಿಂದ ಸೋಮವಾರ ಮುಂಜಾನೆ ನಿಧನರಾಗಿದ್ದಾರೆ, ಮೃತರು ಇಬ್ಬರು ಪುತ್ರರು ಸೇರಿದಂತೆ ಅಪಾರ ಬಂಧು ಬಳಗವನ್ನ ಬಿಟ್ಟು ಅಗಲಿದ್ದಾರೆ. ಮೃತರ ಅಂತ್ಯಕ್ರಿಯೆಯು ಇದೇ ದಿನ ಸಂಜೆ ಪಟ್ಟಣದ ಹೊರವಲಯದಲ್ಲಿರುವ ಮುಕ್ತಿಧಾಮದಲ್ಲಿ ಅಪಾರ ಬಂದು ಬಳಗದ ನಡುವೆ ನೆರವೇರಿತು.

**ಪ್ರಮುಖ ಸುದ್ದಿ**

# ನಾನು ರಾಜಕೀಯ ನಿವೃತ್ತನಾಗುತ್ತೇನೆ: ಸಿದ್ದರಾಮಯ್ಯ

» **ಬೆಂಗಳೂರು**

ಕೇಂದ್ರದಿಂದ 15ನೇ ಹಣಕಾಸು ಆಯೋಗದಲ್ಲಿ ಅನ್ಯಾಯವಾಗಿರುವ ಅನುದಾನ ರಾಜ್ಯಕ್ಕೆ ವಾಪಸ್ ಬಂದಿದೆ ಎಂದು ಸಾಬೀತುಪಡಿಸಿದರೆ ನಾನು ರಾಜಕೀಯದಿಂದಲೂ ನಿವೃತ್ತನಾಗುತ್ತೇನೆ. ಇಲ್ಲವಾದರೆ ಕೇಂದ್ರ ಸಚಿವ ಪ್ರಹ್ಲಾದ್ ಜೋಷಿ ರಾಜೀನಾಮೆ ಕೊಟ್ಟು, ರಾಜಕೀಯದಿಂದ ನಿವೃತ್ತರಾಗುತ್ತಾರೆಯೇ ಎಂದು ಮುಖ್ಯಮಂತ್ರಿ ಸಿದ್ದರಾಮಯ್ಯ ಸವಾಲು ಹಾಕಿದ್ದಾರೆ.

ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ರಾಜ್ಯಕ್ಕೆ ಆಗಿರುವ ಅನ್ಯಾಯದ ವಿರುದ್ಧ ಕೇಂದ್ರ ಸಚಿವ ಪ್ರಹ್ಲಾದ್ ಜೋಷಿ, ಸಂಸದರು ಹಾಗೂ ಮಾಜಿ ಮುಖ್ಯಮಂತ್ರಿಗಳಾದ ಜಗದೀಶ್ ಶೆಟ್ಟರ್, ಬಸವರಾಜ ಬೊಮಾಯಿ ಎಂದಾದರೂ ಮಾತನಾಡಿದ್ದಾರೆಯೇ ಎಂದು ಪ್ರಶ್ನಿಸಿದರು. ಕೇಂದ್ರದಿಂದ ಆಗುತ್ತಿರುವ ತೆರಿಗೆ ಅನ್ಯಾಯಕ್ಕೆ ನ್ಯಾಯಾಲಯಗಳಿಂದ ನ್ಯಾಯ ಸಿಗಲು ಸಾಧ್ಯವಿಲ್ಲ. ಹಣಕಾಸು ಆಯೋಗಗಳಿಂದಲೇ ಅನ್ಯಾಯ ಸರಿಪಡಿಸಲು ಸಾಧ್ಯ. 15ನೇ ಹಣಕಾಸು ಆಯೋಗದಿಂದ ಆಗಿರುವ ತಾರತಮ್ಯ ಸರಿಪಡಿಸಲು ಬೆಂಗಳೂರಿನ ಫೆರಿಪರಲ್ ರಿಂಗ್‌ರಸ್ತೆಹಾಗೂಕೆರೆಅಭಿವೃದ್ಧಿಗೆಸುಮಾರು 11,497 ಕೋಟಿ ಅನ್ಯಾಯವಾಗಿದೆ. ಇದು ಬಿಡುಗಡೆಯಾಗಿಲ್ಲ. ಅನ್ಯಾಯ ಅಲ್ಲವೇ ಎಂದು ಪ್ರಶ್ನಿಸಿದ್ದಾರೆ.

ಈ ಮೊತ್ತ ಕೊಟ್ಟಿದ್ದಾರೆ ಎಂದು ಕೇಂದ್ರ ಸಚಿವ ಪ್ರಹ್ಲಾದ್ ಜೋಷಿ ಹೇಳಲಿ. ನಾನು ರಾಜಕೀಯ ಬಿಡುತ್ತೇನೆ. ಜೋಷಿ ರಾಜಕೀಯ ಬಿಡುತ್ತಾರೆಯೇ ಎಂದು ಸಿದ್ದರಾಮಯ್ಯ ಪುನರುಚ್ಚರಿಸಿದರು. ಕೇಂದ್ರದಿಂದ ನಿರಂತರವಾಗಿ ಅನ್ಯಾಯವಾಗುತ್ತಿದೆ. ಅದರ ಬಗ್ಗೆ ಬಿಜೆಪಿಯವರು ಏಕೆ ಬಾಯಿ ಬಿಡುತ್ತಿಲ್ಲ. ಕೇವಲ ಸುಳ್ಳು ಹೇಳಿ ಜನರನ್ನು ದಾರಿ ತಪ್ಪಿಸುತ್ತಿದ್ದಾರೆ. ನ್ಯಾಯೋಚಿತ ಪಾಲು ಕೇಳುವುದು ರಾಜಕೀಯವಲ್ಲ. ನಮ ಹೋರಾಟ ಎಂದರು.

ಗ್ಯಾರಂಟಿ ಯೋಜನೆಗಳ ವಿರುದ್ಧವಾಗಿ ಬಿಜೆಪಿ ನಿರಂತರವಾಗಿ ಅಪಪ್ರಚಾರ ಮಾಡುತ್ತಿದೆ. ಎಲ್ಲಾ ಜಾತಿ ಧರ್ಮಗಳಿಗೆ



ಗ್ಯಾರಂಟಿ ಯೋಜನೆಗಳ ಮೂಲಕ ಶಕ್ತಿ ತುಂಬಲಾಗುತ್ತಿದೆ. ಸಾಮಾಜಿಕ ನ್ಯಾಯ ಹಾಗೂ ದುರ್ಬಲರನ್ನು ಮುಖ್ಯ ವಾಹಿನಿಗೆ ತರಲು ಸಾಧ್ಯವಾಗುತ್ತದೆ. ಅಸಮಾನತೆ ಇರಬೇಕು ಎಂಬುದು ಬಿಜೆಪಿಯವರ ಹುನ್ನಾರ. ಸಮಾನತೆ ಇದ್ದರೆ ಬಡವರು ಉದ್ದಾರವಾದರೆ ಬಿಜೆಪಿಯವರಿಗೆ ಬಡವರನ್ನು ದುರುಪಯೋಗಪಡಿಸಿಕೊಳ್ಳಲು ಸಾಧ್ಯವಾಗುವುದಿಲ್ಲ. ಅದಕ್ಕಾಗಿ ಅವರು ಗ್ಯಾರಂಟಿ ಯೋಜನೆಯನ್ನು ಪ್ರಧಾನಿಯಾದಿಯಾಗಿ ಎಲ್ಲರೂ ವಿರೋಧಿಸುತ್ತಿದ್ದಾರೆ ಎಂದು ವಾಗ್ದಾಳಿ ನಡೆಸಿದರು.

ಕಾಂಗ್ರೆಸ್ ಸರ್ಕಾರ 165 ಭರವಸೆಗಳಲ್ಲಿ 150 ಭರವಸೆಗಳನ್ನು ಈಡೇರಿಸಿತ್ತು. ಬಿಜೆಪಿ ಚುನಾವಣಾ ಪ್ರಣಾಳಿಕೆಯಲ್ಲಿ ನೀಡಿದ್ದ ಭರವಸೆಗಳನ್ನು ಈಡೇರಿಸುವ ಬಗ್ಗೆ ಲೆಕ್ಕ ಹೇಳುತ್ತದೆಯೇ ಎಂದು ಪ್ರಶ್ನಿಸಿದರು. ವಕ್□□ ವಿಚಾರದಲ್ಲಿ ಸತ್ಯಾಂಶ ಇಲ್ಲದೇ ಇದ್ದರೂ ಬಿಜೆಪಿ ಪ್ರತಿಭಟನೆ ಮಾಡುತ್ತದೆ. ಯಡಿಯೂರಪ್ಪ, ಸದಾನಂದಗೌಡ, ಜಗದೀಶ್‌ಶೆಟ್ಟರ್,ಎಚ್.ಡಿ.ಕುಮಾರಸ್ವಾಮಿ, ಬಸವರಾಜ ಬೊಮಾಯಿ ಅವರು ಮುಖ್ಯಮಂತ್ರಿಗಳಾಗಿದ್ದಾರೆ. ವಕ್□□ ಆಸ್ತಿಗಳ ಒತ್ತುವರಿಗೆ ಸಂಬಂಧಪಟ್ಟಂತೆ 216 ನೋಟಿಸ್‌ಗಳನ್ನು ನೀಡಲಾಗಿತ್ತು. ಅವರು ಏಕೆ ನೋಟಿಸ್ ನೀಡಿದ್ದರು ಎಂದು ಪ್ರಶ್ನಿಸಿದರು.

ಬಿಜೆಪಿ ಹೋರಾಟ ಮಾಡುತ್ತದೆ ಎಂಬ ಕಾರಣಕ್ಕಾಗಿನಾವುನೋಟಿಸ್‌ಹಿಂಪಡೆದಿಲ್ಲ. ನಮ ಗಮನಕ್ಕೆ ಬರುತ್ತಿದ್ದಂತೆ ನಿರ್ಧಾರ ತೆಗೆದುಕೊಂಡಿದ್ದೇವೆ. ಯಾವ ರೈತರನ್ನೂ ಒಕ್ಕಲೆಬ್ಬಿಸುವುದಿಲ್ಲ ಎಂದು ಸ್ಪಷ್ಟಪಡಿಸಿದರು. ಬಿಜೆಪಿ ಸುಳ್ಳು ಆರೋಪ ಮಾಡಿ ರಾಜಕಾರಣಕ್ಕಾಗಿ ಪ್ರತಿಭಟನೆ ನಡೆಸುತ್ತದೆ. ಜನ ಇದನ್ನು ಅರ್ಥ ಮಾಡಿಕೊಳ್ಳುತ್ತಾರೆ. ವಕ್□□ ವಿಚಾರವಾಗಿ ಇದೇ ಬೊಮಾಯಿ ನೀಡಿದ್ದ ಹೇಳಿಕೆ ಏನು? ರಾಜಕೀಯಕ್ಕಾಗಿ ಈಗ ಮಾತನಾಡುತ್ತಿರುವುದೇನು ಎಂದು ಜನರಿಗೆ ಅರ್ಥವಾಗಿದೆ ಎಂದರು.

ವಿಚಾರಣೆಯಿಲ್ಲದೆ ಯಾವುದೇ ಪಹಣಿಗಳಲ್ಲಿ ವಕ್□□ ಆಸ್ತಿ ಎಂದು ನಮೂದಾಗಿದ್ದರೆ ಅದನ್ನು ರದ್ದು ಮಾಡುವಂತೆಯೂ ಸೂಚನೆ ನೀಡಿದ್ದೇನೆ ಎಂದರು. ಹಾವೇರಿ ಜಿಲ್ಲೆಯ ಶಿಗ್ಗಾವಿ ವಿಧಾನಸಭಾ ಕ್ಷೇತ್ರದಲ್ಲಿ ಮೂರು ದಿನ ಪ್ರಚಾರ ನಡೆಸುತ್ತೇನೆ. ಈ ಬಾರಿ 100ಕ್ಕೆ ನೂರರಷ್ಟು ಕಾಂಗ್ರೆಸ್ ಅಭ್ಯರ್ಥಿ ಗೆಲ್ಲುತ್ತಾರೆ ಎಂದು ಅವರು ವಿಶ್ವಾಸ ವ್ಯಕ್ತಪಡಿಸಿದರು.

ಮೈಸೂರಿನ ಮಾಜಿ ಸಂಸದ ಪ್ರತಾಪ್ ಸಿಂಹ ಮಹಾನ್ ಕೋಮುವಾದಿ. ಅವರಿಗೆ ಸಂವಿಧಾನದ ಮೇಲೆ ನಂಬಿಕೆ ಇಲ್ಲ. ಜಾತಿ ಧರ್ಮದ ಹೆಸರಿನಲ್ಲಿ ಸಮಾಜ ಒಡೆದು ಮತ ಗಳಿಸಿ ರಾಜಕೀಯವಾಗಿ ಬದುಕುವ ಪ್ರಯತ್ನ ಮಾಡುತ್ತಿದ್ದಾರೆ ಎಂದು ಸಿದ್ದರಾಮಯ್ಯ ತಿರುಗೇಟು ನೀಡಿದರು



# ಆನ್‌ಲೈನ್ ಗೇಮಿಂಗ್




## ಯುವ ಶಕ್ತಿಯ ಅಂತಃಸತ್ವಕ್ಕೆ ಕೊಳ್ಳಿಯಿಡುತ್ತಿರುವ ಅಪಾಯಕಾರಿ ಆಟ

ಮಾದಕ ದ್ರವ್ಯಗಳು ಈಗಾಗಲೇ ಸಾಕಷ್ಟು ಹಾನಿ ಮಾಡುತ್ತಿರುವಾಗ ಅದಕ್ಕಿಂತ ಅಪಾಯಕಾರಿಯಾಗಿ ಗ್ರಾಮೀಣ ಭಾಗಗಳಿಗೂ ದಾಳಿ ಇಟ್ಟು ಅಧೀಕೃತವಾಗಿಯೇ ಸಾರ್ವಜನಿಕ ಬದುಕನ್ನು ನಾಶ ಮಾಡಲು ಲೈಸೆನ್ಸ್ ಪಡೆದು ಪ್ರವೇಶಿಸಿರುವ ಜೂಜು ಕಟ್ಟೆಗಳು.....

ಕೇವಲ 25/30 ವರ್ಷಗಳ ಹಿಂದಿನವರೆಗೂ ಜೂಜು ಎಂಬುದನ್ನು ಪುರುಷ ವೇಶ್ಯಾ ವೃತ್ತಿ ಎಂದೇ ಪರಿಗಣಿಸಲಾಗಿತ್ತು. ಜೂಜುಕೋರನನ್ನು ದರೋಡೆಕೋರರಿಗಿಂತ ಕೀಳಾಗಿ ಕಾಣಲಾಗುತ್ತಿತ್ತು. ಜೂಜುಕೋರನ ಮನೆಗೆ ಹೆಣ್ಣು ಕೊಡಲು ಸ್ವತಃ ಗಂಡಿನ ಮನೆಯವರೆ ಒಪ್ಪುತ್ತಿರಲಿಲ್ಲ. ಪಾಪ ಇವನಿಂದ ಆ ಹೆಣ್ಣು ಮಗುವಿನ ಬಾಳು ಹಾಳಾಗುವುದು ಬೇಡ ಎಂಬ ಕಾರಣಕ್ಕಾಗಿ......

ಆದರೆ ಈಗ ಸರ್ಕಾರಗಳೇ ಆನ್ ಲೈನ್ ಜೂಜುಗಳಿಗೆ ಅನುಮತಿ ನೀಡುತ್ತಿವೆ. ನಮ್ಮ ಸೂಪರ್ ಮ್ಯಾನ್ ಗಳಾದ ಕೆಲವು ಮನೆಹಾಳ ಸಿನಿಮಾ ನಟರು ಮತ್ತು ಕ್ರೀಡಾಪಟುಗಳು ಎಕ್ಸ್ ಟ್ರಾ ಹಣಕ್ಕಾಗಿ ತಮ್ಮನ್ನೇ ಮಾರಿಕೊಂಡು ಜೂಜಿನ ಜಾಹೀರಾತುಗಳಲ್ಲಿ ನಾಚಿಕೆ ಮಾನ ಮರ್ಯಾದೆ ಇಲ್ಲದೇ ಅತ್ಯಂತ ಹೇಯ ಕೃತ್ಯಗಳಲ್ಲಿ ತೊಡಗಿಸಿಕೊಂಡಿದ್ದಾರೆ......

ಒಂದು ಮನೆಯಲ್ಲಿ ಕೇವಲ ಒಬ್ಬ ಈ ಜೂಜಿನ ಚಟಕ್ಕೆ ಬಲಿಯಾದರೆ ಇಡೀ ಕುಟುಂಬವೇ ನಾಶವಾದಂತೆ. ಭಾರತೀಯ ಸಂಸ್ಕೃತಿಯಲ್ಲಿ ರಕ್ತ ಸಂಬಂಧಗಳಿಗೆ ಹೆಚ್ಚಿನ ಮಹತ್ವ ಇರುವುದರಿಂದ ಆ ಸಂಬಂಧದ ಎಲ್ಲರೂ ಮಾನಸಿಕ ಅವಮಾನ ಮತ್ತು ಆಘಾತದಿಂದ ತತ್ತರಿಸುತ್ತಾರೆ. ಮೊಬೈಲ್ ಇಂಟರ್ನೆಟ್ ಯುಗದಲ್ಲಿ ಇದು ಅತ್ಯಂತ ವೇಗವಾಗಿ ಮತ್ತು ವ್ಯಾಪಕವಾಗಿ ಹಬ್ಬುತ್ತಿದೆ.....

ಜೊತೆಗೆ ಈ ಮನೆಹಾಳ ಆನ್ ಲೈನ್ ಗೇಮಿಂಗ್ ನವರು ಆಕರ್ಷಣೆ ಮಾಡಲು ಉಚಿತವಾಗಿ ಪ್ರಾರಂಭದಲ್ಲಿ ಎಷ್ಟೋ ದೊಡ್ಡ ಮೊತ್ತದ ಹಣವನ್ನು ಪಾಯಿಂಟುಗಳ ರೂಪದಲ್ಲಿ ನೀಡಿ ಮನಸ್ಸು ಚಂಚಲಗೊಳ್ಳುವಂತೆ ಮಾಡುತ್ತಾರೆ. ಈ ಆಧುನಿಕ ಕಾಲದಲ್ಲಿ ಮೊದಲೇ ಯುವಕರು ಏನೇನೋ ಮಾನಸಿಕ ಒತ್ತಡಕ್ಕೆ, ಆರ್ಥಿಕ ಸಂಕಷ್ಟಕ್ಕೆ ಸಿಲುಕಿರುತ್ತಾರೆ. ಅದರ ಸಂಪೂರ್ಣ ದುಷ್ಟ ಲಾಭವನ್ನು ಈ ಗೇಮಿಂಗ್ ನವರು ಪಡೆಯುತ್ತಾರೆ....



ಆನ್ ಲೈನ್ ಗೇಮಿಂಗ್ ವ್ಯವಹಾರ ಸಾವಿರಾರು ಕೋಟಿಗಳನ್ನು ದಾಟಿ ಮುನ್ನಡೆಯುತ್ತಿದೆ. ಈ ಧೋನಿ – ರೋಹಿತ್ ಶರ್ಮಾ ಸೇರಿ ಅನೇಕ ಕ್ರಿಕೆಟ್ ಮತ್ತು ಇತರ ಕ್ರೀಡಾ ಪಟುಗಳು ತಮ್ಮ ತಮ್ಮ ವೃತ್ತಿಯಲ್ಲಿ ಅಪಾರ ಹಣ ಗಳಿಸುತ್ತಾರೆ, ಜಾಹೀರಾತುಗಳು ಮೂಲಕ ಮತ್ತಷ್ಟು ಹಣ ಜೊತೆಗೆ ಇತರ ದೊಡ್ಡ ಕಂಪನಿಗಳಲ್ಲಿ ಹೂಡಿಕೆ ಮಾಡಿ ಅಲ್ಲಿಯೂ ಹಣ. ಇಷ್ಟರ ನಂತರವೂ ಈ ಮನೆಹಾಳ ಜೂಜಿನ ಜಾಹೀರಾತುಗಳಲ್ಲಿ ಭಾಗವಹಿಸಿ ಹಣ ಮಾಡಲು ಬಯಸಿ ಇಡೀ ಭಾರತೀಯ ಯುವ ಸಮೂಹ ದಾರಿ ತಪ್ಪಲು ಹಾದಿ ತೋರಿಸುತ್ತಾರೆ. ಇವರನ್ನು ತಲೆ ಹಿಡುಕರು ಎನ್ನಲು ಸಂಕೋಚ ಪಡಬೇಕೆ ಯೋಚಿಸಿ.....

ಈಗಿನ ನಮ್ಮ ದೇಶದ ಮಹತ್ವಾಕಾಂಕ್ಷೆಯ ಪ್ರಧಾನಿಯವರು ಭಾರತದ್ದು ಅಮೃತ ಕಾಲ. ಇದನ್ನು ವಿಶ್ವ ಗುರು ಮಾಡುವುದಾಗಿ ಪ್ರತಿ ಭಾಷಣದಲ್ಲೂ ಹೇಳುತ್ತಾರೆ. ಭಾರತದ ಆರ್ಥಿಕತೆಯನ್ನು ಇನ್ನೂ ಬೃಹತ್ ಮಾಡುವ ಕನಸನ್ನು ಹೊಂದಿದ್ದಾರೆ. ಬುಲೆಟ್ ಟ್ರೈನುಗಳು, ವಿಮಾನ ನಿಲ್ದಾಣಗಳು, ಸ್ಮಾರ್ಟ್ ಸಿಟಿಗಳು, ದಶಪಥ ರಸ್ತೆಗಳು, ಭವ್ಯ ಪಾರ್ಲಿಮೆಂಟ್ ಹೌಸ್ ಹೀಗೆ ವೈಭವೋಪೇತ ಅಭಿವೃದ್ಧಿ ಮಾಡಬೇಕಿದೆ. ಅದಕ್ಕಾಗಿ ಅವರಿಗೆ ತುಂಬಾ ತುಂಬಾ ದುಡ್ಡು ಬೇಕಾಗಿದೆ. ಯಾವ ಯಾವ ಮೂಲೆಗಳಿಂದ ಹಣ ಬಂದರೂ ಬಿಡುವುದಿಲ್ಲ. ಅದರಲ್ಲೂ ಅತಿಹೆಚ್ಚಿನ ತೆರಿಗೆ ಬರುವ ಆನ್ ಲೈನ್ ಗೇಮಿಂಗ್ ಉದ್ಯಮದ ಆದಾಯವನ್ನು ಕಳೆದುಕೊಳ್ಳಲು ಅವರು ಸಿದ್ದರಿಲ್ಲ. ಪ್ರತಿ ತಿಂಗಳೂ ಜಿಎಸ್ಟಿ ಆದಾಯ ಹೆಚ್ಚಾಗುತ್ತಲೇ ಇರಬೇಕು. ಅವರ ಮುಖ್ಯ ಗುರಿ ಅದೇ ಆಗಿದೆ. ಭಾಷಣದಲ್ಲಿ ಹೇಳುವುದು ಮಾತ್ರ ಧರ್ಮ ಸಂಸ್ಕೃತಿ ಪರಂಪರೆ ಆಚಾರ ವಿಚಾರ. ಆದರೆ ಅನುಮತಿ ಕೊಟ್ಟು ವ್ಯವಹಾರ ನಡೆಸುವುದು ಜೂಜು ಕೇಂದ್ರಗಳಿಂದ........

ಆನ್ ಲೈನ್ ಗೇಮಿಂಗ್ ಚಟಕ್ಕೂ ಪ್ರಧಾನ ಮಂತ್ರಿಗಳ ಅಭಿವೃದ್ಧಿ ಕಾರ್ಯಕ್ರಮಗಳಿಗೂ ಏನು ಸಂಬಂಧ ಎಂದು ಕೆಲವರು ಕೇಳಬಹುದು. ಖಂಡಿತ ನೇರ ಸಂಬಂಧವಿದೆ. ಮನೆಯ ಯಜಮಾನ ಪ್ರಾಮಾಣಿಕ ದುಡಿಮೆಯಿಂದ ಸತ್ಯದ ಮಾರ್ಗದಲ್ಲಿ ಬೆಳೆದರೆ ಮಕ್ಕಳು ಸಹ ಹಾದಿ ತಪ್ಪುವ ಸಾಧ್ಯತೆಗಳು ಕಡಿಮೆ ಮತ್ತು ಸಂಪಾದಿಸಿದ ಹಣವನ್ನು ಸಂಸ್ಕಾರಯುತವಾಗಿ ಉಳಿಸಿ ಬೆಳೆಸುತ್ತಾರೆ. ಇಲ್ಲದಿದ್ದರೆ ಕೆಟ್ಟ ದುಷ್ಟ ಸಂಪಾದನೆಯ ಹಣವನ್ನು ಜೂಜು ಮುಂತಾದ ದುಶ್ಚಟಗಳಲ್ಲಿ ಎಲ್ಲವನ್ನೂ ಕಳೆಯುತ್ತಾರೆ. ಇತಿಹಾಸದ ಅನುಭವದಿಂದ ಇದು ಈಗಾಗಲೇ ಖಚಿತಪಟ್ಟಿದೆ....ಪ್ರತಿಯೊಬ್ಬರ ಬಳಿಯೂ ಮೊಬೈಲ್ ಇರುವುದರಿಂದ ಇದು ಅತ್ಯಂತ ವೇಗವಾಗಿ ಹರಡುತ್ತಿದೆ. ಚುಟುಕು ಕ್ರಿಕೆಟ್ ಇದಕ್ಕೆ ಮತ್ತಷ್ಟು ಪ್ರೋತ್ಸಾಹ ಕೊಡುತ್ತಿದೆ........


ಆನ್ ಲೈನ್ ಗೇಮಿಂಗ್ ಒಡೆಯರು ಈಗಾಗಲೇ ಕೋಟ್ಯಾಧಿಪತಿಗಳಾಗಿ ಭ್ರಷ್ಟ ಮಾರ್ಗದ ಮೂಲಕ ಸರ್ಕಾರಗಳ ಮೇಲೆಯೇ ನಿಯಂತ್ರಣ ಸಾಧಿಸುವ ಮಟ್ಟಕ್ಕೆ ಬೆಳಿದಿದ್ದಾರೆ. ಇದು ಇನ್ನೂ ಹೆಚ್ಚಾದರೆ ತುಂಬಾ ಕಷ್ಟ. ಕ್ರಿಕೆಟ್ ಬೆಟ್ಟಿಗ್ ನಿಂದ ದಾವೂದ್ ಇಬ್ರಾಹಿಂ ನಂತ ನಟೋರಿಯಸ್ ಕ್ರಿಮಿನಲ್ ಸೃಷ್ಟಿಯಾದ ಇತಿಹಾಸ ನಮ್ಮ ಕಣ್ಣ ಮುಂದೆಯೇ ಇದೆ. ಇಂತಹ ಕ್ರಿಮಿನಲ್ ಗಳು ತಮ್ಮ ಅಸ್ತಿತ್ವಕ್ಕೆ ಧಕ್ಕೆ ಬಂದಾಗ ಏನು ಮಾಡಲು ಹೇಸುವುದಿಲ್ಲ.

ಆನ್ ಲೈನ್ ಗೇಮಿಂಗ್ ನಿಂದ ಬರುವ ತೆರಿಗೆ ಆದಾಯ ಅಸಹ್ಯಕ್ಕೆ ಸಮಾನ ಎಂದು ಯಾರಾದರೂ ಈ ದೇಶದ ಮೌಲ್ಯಗಳನ್ನು – ಸಂಸ್ಕಾರಗಳನ್ನು ಕಾಪಾಡಬೇಕು ಎನ್ನುವವರು ದಯವಿಟ್ಟು ಪ್ರಧಾನಿಯವರಿಗೆ ಮನವರಿಕೆ ಮಾಡಿಕೊಡಿ.ಹೇಗಿದ್ದರೂಅನೇಕನಿಷೇಧಗಳನ್ನು ಮಾಡುವುದರಲ್ಲಿ ಈ ಪ್ರಧಾನಿಗಳು ಪರಿಣಿತರು. ಈ ಯುವ ಜನತೆಯ ಅತ್ಯಂತ ಮಾರಕ ಆನ್ ಲೈನ್ ಜೂಜು ಸಹ ನಿಷೇಧಕ್ಕೆ ಒಳಗಾಗಲಿ. ಈ ನಿಷೇಧದ ವಿರುದ್ಧ ಬಹುಶಃ ಕೆಲವೇ ಕೆಲವು ದುಷ್ಟ ಶಕ್ತಿಗಳು ಹೊರತುಪಡಿಸಿ ಯಾವ ಭಾರತೀಯರು ಪ್ರತಿಭಟನೆ ನಡೆಸುವುದಿಲ್ಲ. ಬದಲಾಗಿ ಇದರಿಂದ ಸಂತ್ರಸ್ತವಾದ ಸಾವಿರಾರು ಕುಟುಂಬಗಳು ಪ್ರಧಾನಿಗಳಿಗೆ ಹೃದಯ ಪೂರ್ವಕ ಕೃತಜ್ಞತೆಯನ್ನು ಸಲ್ಲಿಸುತ್ತಾರೆ........

ಈ ಕ್ಷಣದಲ್ಲಿ ಈ ಲೇಖನ ಬರೆಯುತ್ತಿರುವುದರಿಂದ ಈಗಿನ ಪ್ರಧಾನಿಗಳನ್ನು ಹೊಣೆ ಮಾಡಲಾಗಿದೆ. ವಾಸ್ತವವಾಗಿ ಅವರು ಮಾತ್ರವಲ್ಲ. ಹಿಂದಿನ ಮತ್ತು ಈಗಿನ ಎಲ್ಲಾ ರಾಜಕೀಯ ಪಕ್ಷಗಳ ಎಲ್ಲಾ ನಾಯಕರಿಗು ಈ ವಿಷಯದಲ್ಲಿ ಛೀಮಾರಿ ಹಾಕಬೇಕಿದೆ. ಆ ಅಧೋಗತಿಯಲ್ಲಿ ಶಾಸಕಾಂಗ ಮತ್ತು ಕಾರ್ಯಾಂಗವೂ ಸೇರಿ ಅನೇಕರ ಬೇಜವಾಬ್ದಾರಿ ಇದೆ........ಒಳ್ಳೆಯದನ್ನು ಕೇವಲ ಮಾತಿಗೆ ಸೀಮಿತಗೊಳಿಸಿ ಕೆಟ್ಟದ್ದನ್ನು ಮಾತ್ರ ಅನುಮತಿ ನೀಡಿ ಬಹಿರಂಗವಾಗಿ ಪ್ರೋತ್ಸಾಹಿಸುವ ಈ ಗೋಮುಖ ವ್ಯಾಘ್ರತನವನ್ನು ಎಲ್ಲಾ ಸಂಸ್ಕಾರವಂತ ಜನ ಪಕ್ಷಾತೀತವಾಗಿ ವಿರೋಧಿಸಬೇಕಿದೆ........

ಜೂಜು ತೊಲಗಲಿ – ಕ್ರೀಡೆ ಬೆಳೆಯಲಿ – ದೇಶ ಉಳಿಯಲಿ....ಎಂಬ ಅಭಿಯಾನ ಸಾಮಾಜಿಕ ಜಾಲತಾಣಗಳ ಮೂಲಕ ಪ್ರಧಾನಿಯವರಿಗೆ ತಲುಪಿಸುವ ಕೆಲಸವನ್ನು ಎಲ್ಲರೂ ಮಾಡೋಣ.

ಈ ಜೂಜಿನ ಆದಾಯಕ್ಕೆ ಪರ್ಯಾಯವಾಗಿ ಮತ್ತೆ ಏನಾದರೂ ಶ್ರಮದಾಯಕ, ಪ್ರಾಮಾಣಿಕ ಮತ್ತು ಹಾನಿಕಾರಕವಲ್ಲದ ಸಂಸ್ಕಾರಯುತ ಮೂಲಗಳು ಸೃಷ್ಟಿಯಾಗಲಿ.....



▪ ಲೇಖನ
ವಿವೇಕಾನಂದ.
ಹೆಚ್.ಕೆ.
9844013068

# ರಾಜ್ಯಮಟ್ಟದ ನಾಟಿ ಕೋಳಿ ಸಾರು ಮತ್ತು ರಾಗಿಮುದ್ದೆ ಉಣ್ಣುವ ಸ್ಪರ್ಧೆ ನ.10ಕ್ಕೆ

» **ಬೆಂಗಳೂರು**

ನಗರದ ಹೆಚ್ಎಸ್ಆರ್ ಬಡಾವಣೆಯ ಪರಂಗಿಪಾಳ್ಯ ಹತ್ತಿರ ನವೆಂಬರ್ 10 ರ ಭಾನುವಾರದಂದು ಮದ್ಯಾಹ್ನ 12 ರಿಂದ 12:45 ರವರೆಗೆ ಕರ್ನಾಟಕ ಸುವರ್ಣ ಸಂಭ್ರಮ 50ರ ಪ್ರಯುಕ್ತವಾಗಿ ಇದೇ ಮೊದಲ ಬಾರಿಗೆ ಪುರುಷರಿಗೆ ಮತ್ತು ಮಹಿಳೆಯರಿಗೆ ಪ್ರತ್ಯೇಕವಾಗಿ ರಾಜ್ಯಮಟ್ಟದ ನಾಟಿ ಕೋಳಿ ಸಾರು ಮತ್ತು ರಾಗಿ ಮುದ್ದೆ ಉಣ್ಣುವ ಸ್ಪರ್ಧೆಯನ್ನು ಆಯೋಜನೆ ಮಾಡಲಾಗಿದೆ ಎಂದು ಆಯೋಜಕರಾದ ಅನಿಲ್ ರೆಡ್ಡಿ ರವರು ತಿಳಿಸಿದ್ದಾರೆ. ನಗರದಲ್ಲಿ ಸುದ್ದಿಗಾರರೊಂದಿಗೆ ಮಾತನಾಡಿದ ಅವರು ಇದೇ ಪ್ರಥಮ ಬಾರಿಗೆ ಕರ್ನಾಟಕ ಸುವರ್ಣ ಸಂಭ್ರಮ 50ರ ಪ್ರಯುಕ್ತವಾಗಿ ಈ ಕಾರ್ಯಕ್ರಮವನ್ನು ಆಯೋಜನೆ ಮಾಡಲಾಗಿದ್ದು ಪುರುಷರ ವಿಭಾಗದಲ್ಲಿ ಪ್ರಥಮ ಬಹುಮಾನವಾಗಿ ಟಗರು, ದ್ವಿತೀಯ ಬಹುಮಾನವಾಗಿ ಕುರಿ ಪಟ್ಲಿ, ಮೂರನೇ ಬಹುಮಾನವಾಗಿ ಎರಡು ನಾಟಿ ಕೋಳಿ ವಿತರಣೆ ಹಾಗೂ ಮಹಿಳೆಯರ ವಿಭಾಗದಲ್ಲಿ ಪ್ರಥಮ ಬಹುಮಾನವಾಗಿ 32 ಇಂಚಿನ ಟಿವಿ, ದ್ವಿತೀಯ ಬಹುಮಾನವಾಗಿ ಮಿಕ್ಸರ್ ಗ್ರೈಂಡರ್, ತೃತೀಯ ಬಹುಮಾನವಾಗಿ ಕಿಚನ್ ಸೆಟ್ ನೀಡಲಾಗುವುದು. ಪ್ರವೇಶ ಸಂಪೂರ್ಣವಾಗಿ ಉಚಿತವಾಗಿದ್ದು ಮೊದಲು ಹೆಸರು ನೋಂದಾವಣೆ ಮಾಡುವ 125 ಜನರಿಗೆ ಆದ್ಯತೆ ನೀಡಲಾಗುತ್ತದೆ. 45 ನಿಮಿಷಗಳ ಕಾಲ ಮಿತಿಯನ್ನು ನೀಡಲಿದ್ದು ಮಧ್ಯಪಾನ ಮಾಡಿದವರಿಗೆ ಸ್ಪರ್ಧೆಯಲ್ಲಿ ಭಾಗವಹಿಸಲು ಅನುಮತಿ ಇರುವುದಿಲ್ಲ ಎಂದು ಪ್ರಕಟಣೆಯಲ್ಲಿ ತಿಳಿಸಿದ್ದಾರೆ. ಹೆಚ್ಚಿನ ಮಾಹಿತಿಗಾಗಿ 9916506837ಗೆ ಸಂಪರ್ಕಿಸಿ. ಕಾರ್ಯಕ್ರಮದಲ್ಲಿ ವಿಧಾನ ಪರಿಷತ್ ಸದಸ್ಯ ಬಿ.ಕೆ. ಹರಿಪ್ರಸಾದ್ ಉದ್ಘಾಟನೆ ಮಾಡಲಿದ್ದು , ಸಚಿವರಾದ ರಾಮಲಿಂಗಾರೆಡ್ಡಿ ಬಹುಮಾನ ವಿತರಿಸಲಿದ್ದಾರೆ.ಮುಖ್ಯ ಅತಿಥಿಗಳಾಗಿ ಚಿತ್ರ ನಿರ್ಮಾಪಕ ಉಮಾಪತಿಗೌಡ,ಯುವ ಕಾಂಗ್ರೆಸ್ ಕಾರ್ಯಾಧ್ಯಕ್ಷ ಮಂಜುನಾಥ್‌ಗೌಡ, ಭಾರತೀಯ ಸೇವಾ ಸಮಿತಿ ರಾಷ್ಟ್ರೀಯ ಅಧ್ಯಕ್ಷ ಡಾ.ಹೆಚ್.ಎಂ.ರಾಮಚಂದ್ರ, ಚಿತ್ರ ನಿರ್ಮಾಪಕ ಕೆ.ಮಂಜು ಆಗಮಿಸಲಿದ್ದಾರೆ.

# ಪತ್ರಕರ್ತ ಸಂಜೀವಮೂರ್ತಿ ನಿಧನ

**ಹೊಸದುರ್ಗ:** ಸುಮಾರು ದಶಕಗಳಿಂದ ಪತ್ರಿಕಾ ರಂಗದಲ್ಲಿ ಸೇವೆ ಸಲ್ಲಿಸಿದ್ದ ಹಿರಿಯ ಪತ್ರಕರ್ತ ಹೋ.ಸ್ವಾ.ಸಂಜೀವಮೂರ್ತಿ (80) ಮುಂಜಾನೆ ವಯೋ ಸಹಜದಿಂದ ನಿಧನಹೊಂದಿದ್ದಾರೆ. ಹೋ.ಸ್ವಾ.ಸಂಜೀವಮೂರ್ತಿಯವರು ಸುಮಾರು 30 ವರ್ಷ ವಯಸ್ಸಿನರಿದ್ದಾಗಲೆ ಪತ್ರಿಕಾ ರಂಗಕ್ಕೆ ಪಾದಾರ್ಪಣೆ ಮಾಡಿದ ಅವರು ದಾವಣಗೆರೆಯ ನಗರವಾಣಿ, ಚಂದ್ರವಳ್ಳಿ,ಪ್ರಿಯ ಪತ್ರಿಕೆ ಹಾಗೂ ಸಂಯುಕ್ತಕರ್ನಾಟಕ ಪತ್ರಿಕೆ ಸೇರಿದಂತೆ ನಾಡಿನ ಹಲವಾರು ಪತ್ರಿಕೆಗಳಲ್ಲಿ ವಿತರಕರಾಗಿ ವರದಿಗಾರರಾಗಿ ಸಾಕಷ್ಟು ಸೇವೆ ಸಲ್ಲಿಸಿದ್ದಾರೆ.



Printed by: GOVINDAPPA.T Published by: DARSHAN.T Owned by: DARSHAN.T and Printed at: ASHAYA PRINTERS No.94, C.M.C. Colony, Yangammana Katte, Chitradurga-577 501, Chitradurga Dist, Karnataka state. Published at : No. 55 Ingaladal Main Street, Near Canara Banak , Ingaladal Village, Ingaladal Post - 577524, Chitradurga Tq, Chitradurga Dist, Karnataka state. Editor : DARSHAN.T